# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 71 | ರಾಯಚೂರು Raichur 03-09-2026 | ಗುರುವಾರ Thursday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


ಪಾಕ್ ಕ್ರಿಕೆಟ್‌ನಲ್ಲಿ ಬಿರುಗಾಳಿ; ಬರೊಬ್ಬರಿ 7 ಆಟಗಾರರ ಹೊರದಬ್ಬಿದ PCB, ಇಮಾಮ್-ಉಲ್-ಹಕ್‌ಗೆ ತನಿಖೆ ಸಂಕಷ್ಟ!



# ನಿವೃತ್ತ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾಗೆ ಮಹತ್ವದ ಹೊಣೆ





ಭಾರತೀಯ ವಾಯುಪಡೆಯಲ್ಲಿ ಸುಮಾರು ನಾಲ್ಕು ದಶಕಗಳ ಕಾಲ ವಿವಿಧ ಮಹತ್ವದ ಕಮಾಂಡಿಂಗ್ ಹಾಗೂ ಆಡಳಿತಾತ್ಮಕ ಹುದ್ದೆಗಳನ್ನು ನಿರ್ವಹಿಸಿರುವ ನಿವೃತ್ತ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾ ಅವರಿಗೆ ಮಹತ್ವದ ಜವಾಬ್ದಾರಿ ನೀಡಲಾಗಿದೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತೀಯ ವಾಯುಪಡೆಯ ಪಶ್ಚಿಮ ಕಮಾಂಡ್‌ನ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿದ್ದ ಮಿಶ್ರಾ ಅವರು ತಮ್ಮ ಸುದೀರ್ಘ ಸೇವಾ ಅವಧಿಯಲ್ಲಿ ವಾಯುಪಡೆಯ ವಿವಿಧ ವಿಭಾಗಗಳಲ್ಲಿ ಅಪಾರ ಅನುಭವ ಗಳಿಸಿದ್ದಾರೆ.

ಇದೇ ವೇಳೆ ಟ್ರಸ್ಟ್ ತನ್ನ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ವಿಸ್ತರಿಸುವ ನಿಟ್ಟಿನಲ್ಲಿ ಮೂವರು ಹೊಸ ಟ್ರಸ್ಟಿಗಳನ್ನು ಘೋಷಿಸಿದೆ. ವಿಶೇಷವೆಂದರೆ, ಮೊದಲ ಬಾರಿಗೆ ಒಬ್ಬ ಮಹಿಳೆಯನ್ನು ಟ್ರಸ್ಟಿಯಾಗಿ ನೇಮಕ ಮಾಡಲಾಗಿದೆ.

ಹೊಸದಾಗಿ ನೇಮಕಗೊಂಡ ಮೂವರು ಟ್ರಸ್ಟಿಗಳ ಪೈಕಿ ದೆಹಲಿ ಮೂಲದ ಮಹೇಶ್ ಭಾಗಚಂದ್ಕ, ಅಯೋಧ್ಯೆಯ ವಕೀಲ ಮದನ್ ಮೋಹನ್ ಪಾಂಡೆ ಹಾಗೂ ರಾಷ್ಟ್ರೀಯ ಸ್ವಯಂಸೇವಕ ಸಂಘದೊಂದಿಗೆ ನಂಟು ಹೊಂದಿರುವ ಶಿಕೋಹಾಬಾದ್‌ನ ನಿರ್ಮಲಾ ಯಾದವ್ ಸೇರಿದ್ದಾರೆ. ನಿರ್ಮಲಾ ಯಾದವ್ ಅವರ ನೇಮಕದೊಂದಿಗೆ ಟ್ರಸ್ಟ್‌ನಲ್ಲಿ ಮಹಿಳಾ ಪ್ರಾತಿನಿಧ್ಯಕ್ಕೂ ಅವಕಾಶ ದೊರೆತಂತಾಗಿದೆ.

ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾ ಅವರು ಭಾರತೀಯ ವಾಯುಪಡೆಯ ನಿವೃತ್ತ ಹಿರಿಯ ಅಧಿಕಾರಿಯಾಗಿದ್ದು, ವಾಯುಪಡೆಯ ಅತ್ಯಂತ ಪ್ರಮುಖ ಕಮಾಂಡ್‌ಗಳಲ್ಲಿ ಒಂದಾದ ಪಶ್ಚಿಮ ವಾಯು ಕಮಾಂಡ್‌ನ ಏರ್ ಆಫೀಸರ್ ಕಮಾಂಡಿಂಗ್-ಇನ್-ಚೀಫ್ ಆಗಿ ಸೇವೆ ಸಲ್ಲಿಸಿದ್ದಾರೆ.

ಸುಮಾರು 38 ವರ್ಷಗಳಿಗೂ ಅಧಿಕ ಕಾಲ ಭಾರತೀಯ ವಾಯುಪಡೆಯಲ್ಲಿ ಸೇವೆ ಸಲ್ಲಿಸಿರುವ ಅವರು, ಯುದ್ಧವಿಮಾನ ಕಾರ್ಯಾಚರಣೆ, ವಿಮಾನ ಪರೀಕ್ಷೆ, ವಾಯುನೆಲೆಗಳ ಆಡಳಿತ, ರಕ್ಷಣಾ ಯೋಜನೆ ರೂಪಿಸುವಿಕೆ ಹಾಗೂ ಉನ್ನತ ಮಟ್ಟದ ಸಮನ್ವಯ ಕಾರ್ಯಗಳಲ್ಲಿ ವಿಶಾಲ ಅನುಭವ ಹೊಂದಿದ್ದಾರೆ.

ತಮ್ಮ ವೃತ್ತಿಜೀವನದ ಆರಂಭದಿಂದಲೇ ವಿವಿಧ ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾಯಿಸಿರುವ ಮಿಶ್ರಾ 2ನೇ ಪುಟಕ್ಕೆ

## ಜಿಲ್ಲೆಯ ಕೊಲೆ-ಅತ್ಯಾಚಾರ ಪ್ರಕರಣಗಳಿಗೆ ಕಠಿಣ ಕ್ರಮಕ್ಕೆ ಆಗ್ರಹ



ಬೆಂಗಳೂರು: ರಾಯಚೂರು ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದಿರುವ ಕೊಲೆ ಹಾಗೂ ಅತ್ಯಾಚಾರ ಪ್ರಕರಣಗಳ ಕುರಿತು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ನೇತೃತ್ವದ ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಕಾಂಗ್ರೆಸ್ ಮುಖಂಡರ ನಿಯೋಗವು ಬುಧವಾರ ಬೆಂಗಳೂರಿನ ಅಂಬೇಡ್ಕರ್ ಭವನದಲ್ಲಿ ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ಅವರನ್ನು ಭೇಟಿ ಮಾಡಿ ಚರ್ಚಿಸಿತು. ಸಿರವಾರ ತಾಲ್ಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ ಅತ್ಯಾಚಾರ ಮತ್ತು ಕೊಲೆ ಪ್ರಕರಣ, ದೇವದುರ್ಗ ತಾಲ್ಲೂಕಿನ ಹದ್ದಿನಾಳ ಗ್ರಾಮದ ದಲಿತ ಮುಖಂಡ ಭೂಮಾನಂದ ಕೊಲೆ ಪ್ರಕರಣ ಹಾಗೂ ಲಿಂಗಸುಗೂರು ತಾಲ್ಲೂಕಿನ ರಾಣೆಮ್ಮ ಕೊಲೆ ಪ್ರಕರಣ ಸೇರಿದಂತೆ ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದಿರುವ ವಿವಿಧ ಅಪರಾಧ ಪ್ರಕರಣಗಳ ಕುರಿತು ನಿಯೋಗವು ಸಚಿವರ ಗಮನ ಸೆಳೆಯಿತು. ಪ್ರಕರಣಗಳ ತನಿಖೆಯನ್ನು ತ್ವರಿತಗೊಳಿಸಿ, ತಪ್ಪಿತಸ್ಥರನ್ನು ಶೀಘ್ರ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಸಂತ್ರಸ್ತ 2ನೇ ಪುಟಕ್ಕೆ

## ಅನು ಮಂತ್ರಾಲಯದಲ್ಲಿ ಮಹಾ ರಥೋತ್ಸವಕ್ಕೆ ಶ್ರೀ ಸುಬುಧೇಂದ್ರ ತೀರ್ಥರಿಂದ ಚಾಲನೆ



ಮಂತ್ರಾಲಯ: ಶ್ರೀಮಠದ ಪವಿತ್ರ ಸಂಪ್ರದಾಯದಂತೆ ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ನಡೆಯುವ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳ ಅಂಗವಾಗಿ ಶ್ರೀಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಬುಧವಾರ ಅನು ಮಂತ್ರಾಲಯ (ತುಂಗಭದ್ರಾ)ದಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಭೇಟಿ ನೀಡಿ, ಮಹಾ ರಥೋತ್ಸವಕ್ಕೆ ಮಂಗಳಕರ ಚಾಲನೆ ನೀಡಿದರು.

ಶ್ರೀಮಠಕ್ಕೆ ಆಗಮಿಸಿದ ಶ್ರೀಪಾದಂಗಳವರನ್ನು ಮಠದ ಅಧಿಕಾರಿಗಳು, ಅರ್ಚಕರು, ಸಿಬ್ಬಂದಿ ಹಾಗೂ ಭಕ್ತರು ಭಕ್ತಿಪೂರ್ವಕವಾಗಿ ಸ್ವಾಗತಿಸಿದರು. ಬಳಿಕ ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದ ಶ್ರೀಪಾದಂಗಳವರು, ಶ್ರೀಮಠದ ಪರಂಪರೆಯಂತೆ ಮಹಾ ರಥೋತ್ಸವಕ್ಕೆ ಪೂಜೆ ಸಲ್ಲಿಸುವ ಮೂಲಕ ವಿಧ್ಯುಕ್ತವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ರಾಯರ ಉತ್ಸವ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಲಾಗಿದ್ದು, ಮಂತ್ರಘೋಷ, ವೇದಪಾರಾಯಣ ಮತ್ತು ಭಜನೆಗಳ ನಡುವೆ ರಥೋತ್ಸವ ಭಕ್ತಿಭಾವದಿಂದ 2ನೇ ಪುಟಕ್ಕೆ

## ಭಾರತ್‌ಮಾಲಾ ಹೆದ್ದಾರಿ ಕಾಮಗಾರಿ ಪರಿಶೀಲಿಸಿದ ಸಂಸದ ಜಿ. ಕುಮಾರ ನಾಯಕ



ಯಾದಗಿರಿ: ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಭಾರತ್ ಮಾಲಾ ಯೋಜನೆಯಡಿ ನಿರ್ಮಾಣವಾಗುತ್ತಿರುವ ಚೆನ್ನೈ ಸೂರತ್ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯ ಪ್ಯಾಕೇಜ್‌3ರ ಪ್ರಗತಿಯನ್ನು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಪರಿಶೀಲಿಸಿದರು.

ಪ್ಯಾಕೇಜ್‌3ರ ವ್ಯಾಪ್ತಿಯಲ್ಲಿ ಬಸಂತಪುರದಿಂದ ಶಹಾಪುರ ತಾಲೂಕಿನ ಸಿರವಾಳ್ ಗ್ರಾಮದವರೆಗೆ ನಡೆಯುತ್ತಿರುವ ಹೆದ್ದಾರಿ ಕಾಮಗಾರಿಯನ್ನು ವೀಕ್ಷಿಸಿದ ಅವರು, ಕಾಮಗಾರಿಯ ಪ್ರಗತಿ, ಗುಣಮಟ್ಟ ಹಾಗೂ ಅನುಷ್ಠಾನದ ಕುರಿತು ಎನ್‌ಎಚ್‌ಎಐ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಹೆದ್ದಾರಿ ನಿರ್ಮಾಣದಿಂದ ರೈತರು ಮತ್ತು ಗ್ರಾಮಸ್ಥರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯವಿರುವ ಸ್ಥಳಗಳಲ್ಲಿ ಅಂಡರ್‌ಪಾಸ್‌ಗಳನ್ನು ನಿರ್ಮಿಸಬೇಕು. ರೈತರು ತಮ್ಮ ಜಮೀನುಗಳಿಗೆ ಸುಗಮವಾಗಿ ತೆರಳಲು ಅನುಕೂಲವಾಗುವಂತೆ ಸರ್ವೀಸ್ ರಸ್ತೆಗಳ ವ್ಯವಸ್ಥೆ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮಗಳ ಪ್ರವೇಶ ಹಾಗೂ ನಿರ್ಗಮನ ಪ್ರದೇಶಗಳು, ಅಂಡರ್‌ಪಾಸ್, ಸರ್ವೀಸ್ ರಸ್ತೆ ಮತ್ತು ತಿರುವುಗಳಿರುವ ಸ್ಥಳಗಳಲ್ಲಿ ವಾಹನ ಸವಾರರಿಗೆ ಸ್ಪಷ್ಟ 2ನೇ ಪುಟಕ್ಕೆ

## ಜನಪರ, ಪಾರದರ್ಶಕ ಆಡಳಿತಕ್ಕೆ ಡಿ.ಕೆ. ಶಿವಕುಮಾರ್‌ಗೆ ತಲಕಾಯ ಮಾರೇಪ್ಪ ಅಭಿನಂದನೆ



ಬೆಂಗಳೂರು: ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ಹಿರಿಯ ಉಪಾಧ್ಯಕ್ಷ ತಲಕಾಯ ಮಾರೇಪ್ಪ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ಭ್ರಷ್ಟಾಚಾರ ಮುಕ್ತ, ಪಾರದರ್ಶಕ ಹಾಗೂ ಜನಮೆಚ್ಚುವ ಆಡಳಿತ ನೀಡುತ್ತಿರುವುದಕ್ಕೆ ಅಭಿನಂದನೆ ಸಲ್ಲಿಸಿದರು.

ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿದು ಪ್ರಜಾಸತ್ತಾತ್ಮಕ ವ್ಯವಸ್ಥೆಗೆ ಬಲ ನೀಡುವ ನಿಟ್ಟಿನಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ನಿರುದ್ಯೋಗ ಸಮಸ್ಯೆ ನಿವಾರಣೆಗೆ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಜನರ ನೋವು, ಸಮಸ್ಯೆ ಹಾಗೂ ಕುಂದುಕೊರತೆಗಳನ್ನು ಅರಿತು ಪರಿಹರಿಸುವ ಉದ್ದೇಶದಿಂದ ಪ್ರತ್ಯೇಕ ವ್ಯವಸ್ಥೆ ರೂಪಿಸುವ ಮೂಲಕ ಜನಸ್ಪಂದನೆಗೆ ಆದ್ಯತೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಕೆಪಿಎಸ್‌ಸಿಯಲ್ಲಿ ಪಾರದರ್ಶಕತೆ ತರಲು ಸರ್ಕಾರ ಮುಂದಾಗಿದ್ದು, ಅಲ್ಲಿನ ಅವ್ಯವಹಾರಗಳ ಬಗ್ಗೆ ಮುಖ್ಯಮಂತ್ರಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಕ್ರಮ ಹಾಗೂ ಭ್ರಷ್ಟಾಚಾರದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ತನಿಖಾ ಸಂಸ್ಥೆಗಳಿಗೆ ಮುಕ್ತ ಅವಕಾಶ ನೀಡಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಮಾರೇಪ್ಪ ಹೇಳಿದರು.

ದೊಡ್ಡ ಹೋಟೆಲ್‌ಗಳಲ್ಲಿ ಕಲುಷಿತ ಹಾಗೂ ಗುಣಮಟ್ಟವಿಲ್ಲದ ಆಹಾರ ಗ್ರಾಹಕರಿಗೆ ತಲುಪದಂತೆ ಅಧಿಕಾರಿಗಳು ತಪಾಸಣೆ ಮತ್ತು ದಾಳಿ ನಡೆಸುತ್ತಿದ್ದಾರೆ. ಅದೇ ರೀತಿ ಸಾರ್ವಜನಿಕರಿಗೆ ವಿತರಿಸಲಾಗುವ ಪಡಿತರ ಆಹಾರಧಾನ್ಯಗಳ ಪೂರೈಕೆ, ಸಾಗಣೆ, ಸಂಗ್ರಹಣೆ ಹಾಗೂ ವಿತರಣಾ ವ್ಯವಸ್ಥೆಯ ಮೇಲೂ ನಿಗಾ ವಹಿಸಲಾಗಿದೆ. ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಸಮಸ್ಯೆಗಳಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿರುವುದು ಸ್ವಾಗತಾರ್ಹ ಎಂದರು.

ಅಧಿಕಾರಕ್ಕೆ ಬಂದ ಅಲ್ಪಾವಧಿಯಲ್ಲಿಯೇ ಜನರಿಗೆ ಮೆಚ್ಚುಗೆಯಾಗುವಂತಹ ಆಡಳಿತ ನೀಡಲು ಸರ್ಕಾರ ಮುಂದಾಗಿದೆ. ಆಡಳಿತದಲ್ಲಿ ಲೋಪ ಎಸಗುವವರು ಹಾಗೂ ಆರೋಪಕ್ಕೆ ಗುರಿಯಾದವರ ವಿರುದ್ಧ ಕಠಿಣ ನಿಲುವು ತಾಳುವ ಮೂಲಕ ಅಧಿಕಾರಿಗಳಿಗೆ ಭ್ರಷ್ಟಾಚಾರ ಮುಕ್ತ ಆಡಳಿತ ನೀಡುವಂತೆ ಸ್ಪಷ್ಟ ಎಚ್ಚರಿಕೆ ನೀಡಲಾಗಿದೆ. ಮುಂಬರುವ ದಿನಗಳಲ್ಲಿ ಆಡಳಿತ ವ್ಯವಸ್ಥೆಯಲ್ಲಿ ಮತ್ತಷ್ಟು ಬಿಗಿ ಮತ್ತು ಶಿಸ್ತು ತರಲಾಗುತ್ತದೆ ಎಂಬ ವಿಶ್ವಾಸವಿದೆ ಎಂದು ಅವರು ಹೇಳಿದರು.

ಜನಪರ ಕಾರ್ಯಕ್ರಮಗಳು ಹಾಗೂ ಅಭಿವೃದ್ಧಿ ಕಾರ್ಯಗಳಿಂದ ಕಾಂಗ್ರೆಸ್ ಪಕ್ಷದ ಮೇಲಿನ ಜನರ ವಿಶ್ವಾಸ ಹೆಚ್ಚುತ್ತಿದೆ. ಮುಂಬರುವ ಸ್ಥಳೀಯ ಸಂಸ್ಥೆ, ವಿಧಾನಸಭೆ ಹಾಗೂ ಲೋಕಸಭಾ ಚುನಾವಣೆಗಳಲ್ಲಿಯೂ ಕಾಂಗ್ರೆಸ್ ಪಕ್ಷ ಜಯಭೇರಿ ಬಾರಿಸಲಿದೆ ಎಂದು ತಲಕಾಯ ಮಾರೇಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ಬಿಜೆಪಿ ವಿರುದ್ಧ ಟೀಕಿಸಿದ ಅವರು, ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಬಿಜೆಪಿ ಪಾದಯಾತ್ರೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಜನಪರ ಆಡಳಿತವನ್ನು ಸಹಿಸಿಕೊಳ್ಳಲಾಗದೆ ಇಂತಹ ನಡೆ ಅನುಸರಿಸುತ್ತಿದ್ದು, ಬಿಜೆಪಿಯ ರಾಜಕೀಯ ನಾಟಕವನ್ನು ಜನರು ಈಗಾಗಲೇ ಅರಿತುಕೊಂಡಿದ್ದಾರೆ ಎಂದು ತಲಕಾಯ ಮಾರೇಪ್ಪ ತಿಳಿಸಿದ್ದಾರೆ.






## ಬ್ರಹ್ಮಶ್ರೀ ನಾರಾಯಣ ಗುರುಗಳ ಆದರ್ಶಗಳನ್ನು ಮಕ್ಕಳಲ್ಲಿ ಬೆಳೆಸಿ: ತಹಶೀಲ್ದಾರ್ ಸುರೇಶ ವರ್ಮಾ




ರಾಯಚೂರು ಸೆಪ್ಟಂಬರ್ 02 (ಕರ್ನಾಟಕ ವಾರ್ತೆ): ಬ್ರಹ್ಮಶ್ರೀ ನಾರಾಯಣ ಗುರುಗಳ ವಿಚಾರ, ಸಿದ್ಧಾಂತ ಹಾಗೂ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದರ ಜೊತೆಗೆ ಮಕ್ಕಳಲ್ಲಿಯೂ ಬೆಳೆಸಬೇಕು ಎಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಹೇಳಿದರು.

ಸೆಪ್ಟಂಬರ್ 02ರ ಬುಧವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ನಾರಾಯಣ ಗುರು ಜಯಂತಿಯಲ್ಲಿ ಅತ್ಯಂತ ಉತ್ಸಾಹದಿಂದ ಭಾಗವಹಿಸಿ, ಮೆರವಣಿಗೆ ಹಾಗೂ ವಿವಿಧ ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ತಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಪ್ರದರ್ಶಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸಲಾಗುವುದೆಂದರು. ಜಯಂತಿ ಆಚರಣೆಯು ಕೇವಲ ಒಂದು ದಿನದ ಕಾರ್ಯಕ್ರಮಕ್ಕೆ ಸೀಮಿತವಾಗಬಾರದು. ನಾರಾಯಣ ಗುರುಗಳ ವಿಚಾರಧಾರೆ ಹಾಗೂ ಆದರ್ಶಗಳನ್ನು ಮನೆ, ಮನಗಳಲ್ಲಿ ಅನುಸರಿಸುವ ಮೂಲಕ ಮಕ್ಕಳಿಗೂ ಪರಿಚಯಿಸಬೇಕು ಎಂದರು.

ನಾರಾಯಣ ಗುರುಗಳು ಕೇವಲ ಒಬ್ಬ ವ್ಯಕ್ತಿಯಲ್ಲ, ಭಾರತದ ಮಣ್ಣಿನಲ್ಲಿ ಹುಟ್ಟಿದ ಶಕ್ತಿಯಾಗಿದ್ದರು. ಅಂಧಶ್ರದ್ಧೆ, ಮೌಢ್ಯ, ಮೇಲು-ಕೀಳು ಎಂಬ ಭೇದಭಾವ ಹಾಗೂ ಅಸ್ಪೃಶ್ಯತೆ ವ್ಯಾಪಕವಾಗಿದ್ದ ಸಂದರ್ಭದಲ್ಲಿ ಸಮಾಜಕ್ಕೆ ಅವರು ಬೆಳಕಾಗಿ 2ನೇ ಪುಟಕ್ಕೆ




# ಉತ್ತಮ ಮಳೆಗಾಗಿ ಸೆ.4ರಂದು ಮುನ್ನೂರು ಕಾಪು ಸಮಾಜದಿಂದ ಪುಟ್ಟಿ ಜಾತ್ರೆ

ರಾಯಚೂರು, ಸೆ.2: ಜಿಲ್ಲೆಯಲ್ಲಿ ಉತ್ತಮ ಮಳೆ ಸುರಿದು ರೈತರ ಬದುಕು ಹಸನಾಗಲಿ ಹಾಗೂ ಬೆಳೆಗಳು ಸಮೃದ್ಧವಾಗಿ ಬೆಳೆಯಲಿ ಎಂಬ ಆಶಯದೊಂದಿಗೆ ಮುನ್ನೂರು ಕಾಪು ಸಮಾಜದ ವತಿಯಿಂದ ಸೆಪ್ಟೆಂಬರ್ 4ರಂದು ಪುಟ್ಟಿ ಜಾತ್ರಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಸಮಾಜದ ಹಿರಿಯ ಮುಖಂಡ ಹಾಗೂ ಮಾಜಿ ಶಾಸಕ ಎ. ಪಾಪಾರೆಡ್ಡಿ ಮತ್ತು ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ ತಿಳಿಸಿದ್ದಾರೆ.

ಈ ಬಾರಿ ಜಿಲ್ಲೆಯಲ್ಲಿ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸುರಿಯದ ಕಾರಣ ರೈತರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಮುಂಗಾರು ಆರಂಭದಿಂದಲೂ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳ ಮೇಲೂ ಪರಿಣಾಮ ಬೀರಿದೆ. ಈ ಹಿನ್ನೆಲೆಯಲ್ಲಿ ಉತ್ತಮ ಮಳೆಯಾಗಿ ರೈತರಿಗೆ ಅನುಕೂಲವಾಗಲಿ ಎಂದು ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸುವ ಉದ್ದೇಶದಿಂದ ಪ್ರತಿವರ್ಷದಂತೆ ಈ ವರ್ಷವೂ ಪುಟ್ಟಿ ಜಾತ್ರೆ ಆಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸೆ.4ರಂದು ನಗರದ ಮಕ್ತಲ್‌ಪೇಟೆಯ ಲಕ್ಷ್ಮಿದೇವಿ ದೇವಸ್ಥಾನದಿಂದ ಗದ್ವಾಲ್ ರಸ್ತೆಯಲ್ಲಿರುವ ಲಕ್ಷ್ಮಿ ದೇವಸ್ಥಾನದವರೆಗೆ ಪುಟ್ಟಿ ಜಾತ್ರೆ ನಡೆಯಲಿದೆ.

ಸಮಾಜದ ಬಾಂಧವರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಸಮಾಜದ ಪ್ರಧಾನ ಕಾರ್ಯದರ್ಶಿ ಜಿ. ಶೇಖರ್ ರೆಡ್ಡಿ ಹಾಗೂ ಬಂಗಿ ನರಸರೆಡ್ಡಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಬರ ಘೋಷಣೆ, 9ಎ ಕಾಲುವೆ ಪೂರ್ಣಗೊಳಿಸಲು ಎಐಕೆಎಸ್ ಆಗ್ರಹ: ಬೇಡಿಕೆ ಈಡೇರದಿದ್ದರೆ ಕವಿತಾಳ ಬಂದ್ ಎಚ್ಚರಿಕೆ



ಕವಿತಾಳ: ತೀವ್ರ ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಸಿರವಾರ, ಮಾನ್ವಿ ಹಾಗೂ ಸಿಂಧನೂರು ತಾಲೂಕುಗಳನ್ನು ಸರ್ಕಾರದ ಬರಪೀಡಿತ ಪ್ರದೇಶಗಳ ಪಟ್ಟಿಯಿಂದ ಹೊರಗಿಟ್ಟಿರುವುದನ್ನು ವಿರೋಧಿಸಿ ಅಖಿಲ ಭಾರತ ಕಿಸಾನ್ ಸಂಘಟನೆ (ಎಐಕೆಎಸ್) ಕವಿತಾಳ ಘಟಕದ ನೇತೃತ್ವದಲ್ಲಿ ಕಂದಾಯ ಇಲಾಖೆಯ ಉಪ ತಹಶೀಲ್ದಾರ್ ಮಂಜುನಾಥ್ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಜಸ್ವಾಲ್ ಸಿಂಗ್ ಅವರಿಗೆ ಹಕ್ಕೊತ್ತಾಯ ಪತ್ರ ಸಲ್ಲಿಸಲಾಯಿತು.

ಕವಿತಾಳ ಹೋಬಳಿ ವ್ಯಾಪ್ತಿಯಲ್ಲಿ ಮಳೆ ಕೊರತೆಯಿಂದ ಬೆಳೆಗಳು ಸಂಪೂರ್ಣ ಕಮರಿಹೋಗಿದ್ದು, ರೈತರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಕೂಡಲೇ ಈ ಭಾಗವನ್ನು ಶಾಸನಬದ್ಧವಾಗಿ ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆ ನಷ್ಟ ಹಾಗೂ ಬೆಳೆ ವಿಮೆ ಪರಿಹಾರ ಕಲ್ಪಿಸಬೇಕು ಎಂದು ಸಂಘಟನೆಯ ಮುಖಂಡರು ಒತ್ತಾಯಿಸಿದರು.

ನೂರಾರು ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಂಡಿರುವ 9ಎ ಕಾಲುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಕಾಲುವೆಯಲ್ಲಿ ನೀರು ಪೋಲಾಗುವುದನ್ನು ತಡೆದು ರೈತರ ಹೊಲಗಳಿಗೆ ಸಮರ್ಪಕವಾಗಿ ನೀರಾವರಿ ಸೌಲಭ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಇದಲ್ಲದೆ, ನೈಜಾಂ ಕಾಲದ ಐತಿಹಾಸಿಕ ಸಾರ್ವಜನಿಕ ಕೆರೆ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಪೋಲಾಗುತ್ತಿದ್ದು, ಕೆರೆ ಒತ್ತುವರಿಯನ್ನು ತೆರವುಗೊಳಿಸಬೇಕು. ಸಂಬಂಧಪಟ್ಟ ರೈತರಿಗೆ ಪರಿಹಾರ ನೀಡಿ, 9ಎ ಕಾಲುವೆಯ ನೀರನ್ನು ಕೆರೆಗೆ ಜೋಡಿಸುವ ಮೂಲಕ ಕವಿತಾಳ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಟಿಎಲ್‌ಬಿಸಿ 73ನೇ ಕ್ಯಾಂಪ್‌ನಲ್ಲಿ ದಶಕಗಳಿಂದ ವಾಸಿಸುತ್ತಿರುವ ಕೂಲಿ ಕಾರ್ಮಿಕರಿಗೆ ನಿವೇಶನದ ಹಕ್ಕುಪತ್ರ ನೀಡಬೇಕು ಎಂಬ ಬೇಡಿಕೆಯನ್ನೂ ಮುಂದಿಟ್ಟಿದ್ದಾರೆ.

ಈ ಎಲ್ಲ ಬೇಡಿಕೆಗಳನ್ನು ನಿಗದಿತ ಕಾಲಮಿತಿಯೊಳಗೆ ಈಡೇರಿಸದಿದ್ದರೆ ಎತ್ತಿನ ಬಂಡಿ ಹಾಗೂ ಟ್ರ್ಯಾಕ್ಟರ್ ಜಾಥಾ ನಡೆಸಿ ಕವಿತಾಳ ಬಂದ್‌ಗೆ ಕರೆ ನೀಡುವ ಮೂಲಕ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಸಂಘಟನೆ ಆಡಳಿತ ವರ್ಗಕ್ಕೆ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಬಸಲಿಂಗಪ್ಪ ಹಿರೇನಗನೂರು, ಎಐಕೆಎಸ್ ಅಧ್ಯಕ್ಷ ಹಸನ್‌ಸಾಬ್ ಗಿಡ್ಡಿ, ಉಪಾಧ್ಯಕ್ಷ ಹನುಮಂತ ಜಾಲಹಳ್ಳಿ, ಸದಸ್ಯ ಮೈಮುದ್, ಮುಖಂಡರಾದ ಚಂದಪ್ಪ ಕವಿತಾಳ, ರಮೇಶ ಇರಬಿಗೇರ, ಹುಲಗಪ್ಪ ಸೈದಾಪುರ, ಎಂ.ಡಿ. ಮೈಬೂಬ್ ಸಾಬ್, ವೀರಭದ್ರಪ್ಪ ಗಡ್ಡಿ, ನಿಂಗಣ್ಣ ಸಂಗಟಿ, ಹನುಮಂತ ಬುಳ್ಳಾಪುರು, ಲಳೀಶ ಕಲಂಗೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅಮೃತ ವಾಣಿ

ಉಪವಾಸ
ಅನ್ನದ್ದಲ್ಲ,
ಕೆಟ್ಟ
ಆಲೋಚನೆಗಳಾದ್ದಾಗಿರಬೇಕು.

## 1574 ನೇಯ ದಿನಕ್ಕೆ ಏಮ್ಸ್ ಹೋರಾಟ

# ನಗರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ




ರಾಯಚೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯನ್ನು ಬುಧವಾರ ನಗರದಲ್ಲಿ ಭಕ್ತಿ ಹಾಗೂ ಸಡಗರದಿಂದ ಆಚರಿಸಲಾಯಿತು.

ನಗರದ ಆರ್ಯ ಈಡಿಗ ಸಮಾಜದ ಕಾರ್ಯಾಲಯದ ಮಹಿಳಾ ಸಮಾಜದ ಮುಂಭಾಗದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುಗಳ ಭಾವಚಿತ್ರಕ್ಕೆ ಕಿಲ್ಲೆ ಬ್ರಹ್ಮನಮಠದ ಶಾಂತಮಲ್ಲ ಶಿವಾಚಾರ್ಯರ ನೇತೃತ್ವದಲ್ಲಿ ಸಮಾಜದ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಪೂಜೆ ಸಲ್ಲಿಸಿದರು. ಬಳಿಕ ನಾರಾಯಣ ಗುರುಗಳ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಲಾಯಿತು.

ಮೆರವಣಿಗೆಯು ಆರ್ಯ ಈಡಿಗ ಸಮಾಜದ ಕಾರ್ಯಾಲಯದ ಮಹಿಳಾ ಸಮಾಜದ ಮುಂಭಾಗದಿಂದ ಆರಂಭಗೊಂಡು ನಗರದ ಪ್ರಮುಖ ಬೀದಿಗಳ ಮೂಲಕ ಸಾಗಿತು. ಸಮಾಜದ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ನಂತರ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

# ನಿವೇಶನ ರಹಿತ ಬಡ ಕೂಲಿಕಾರರಿಗೆ ವಸತಿ ಕಲ್ಪಿಸಲು ಆಗ್ರಹ: ಕವಿತಾಳದಲ್ಲಿ ಅನಿರ್ದಿಷ್ಟಾವಧಿ ಧರಣಿ



ಕವಿತಾಳ: ಗ್ರಾಮದ ನಿವೇಶನ ರಹಿತ ಬಡ ಕೂಲಿಕಾರರಿಗೆ ತಕ್ಷಣವೇ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರೈತ ಸಂಘ (ಎಐಕೆಕೆಎಸ್) ನೇತೃತ್ವದಲ್ಲಿ ಸ್ಥಳೀಯ ಗ್ರಾಮ ಪಂಚಾಯಿತಿ ಕಾರ್ಯಾಲಯದ ಮುಂಭಾಗ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಆರಂಭಿಸಲಾಗಿದೆ.

ಗ್ರಾಮದಲ್ಲಿ ಎಸ್‌ಸಿ, ಎಸ್‌ಟಿ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಕೃಷಿ ಕೂಲಿಕಾರರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದು, ದಶಕಗಳಿಂದ ಸಮಗ್ರ ವಸತಿ ಯೋಜನೆಯ ಸೌಲಭ್ಯದಿಂದ ವಂಚಿತರಾಗಿದ್ದಾರೆ. ಮಾರುಕಟ್ಟೆಯಲ್ಲಿ ನಿವೇಶನಗಳ ಬೆಲೆ ಗಗನಕ್ಕೇರಿರುವುದರಿಂದ ಬಡ ಕುಟುಂಬಗಳಿಗೆ ನಿವೇಶನ ಖರೀದಿಸುವುದು ಅಸಾಧ್ಯವಾಗಿದೆ. ಇದರಿಂದ ಅನೇಕ ಕುಟುಂಬಗಳು ಸಣ್ಣ ಶೆಡ್‌ಗಳಲ್ಲಿ ಒಂದೇ ಕಡೆ ಸಂಕಷ್ಟದ ಪರಿಸ್ಥಿತಿಯಲ್ಲಿ ಜೀವನ ನಡೆಸುವಂತಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಪಾಮನಕಲ್ಲೂರು ಸರ್ವೇ ನಂ.151ರ ಸರ್ಕಾರಿ ಗೈರಾಣು ಭೂಮಿಯಲ್ಲಿ ಸುಮಾರು 4ರಿಂದ 6 ಎಕರೆ ಜಮೀನು ಗುರುತಿಸಿ, ವಸತಿ ರಹಿತ ಬಡ ಕುಟುಂಬಗಳಿಗೆ ನಿವೇಶನ ಹಂಚಿಕೆ ಮಾಡುವಂತೆ ಗ್ರಾಮ ಪಂಚಾಯಿತಿಯಿಂದ ಈಗಾಗಲೇ ತಾಲೂಕು ಆಡಳಿತಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದರೆ ತಹಶೀಲ್ದಾರ್ ಹಾಗೂ ತಾಲೂಕು ಪಂಚಾಯಿತಿ ಅಧಿಕಾರಿಗಳು ಈವರೆಗೆ ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಮುಖಂಡರು ಆರೋಪಿಸಿದರು.

ತಾಲೂಕು ಆಡಳಿತವು ಕೂಡಲೇ ಸ್ಥಳ ಪರಿಶೀಲನೆ ನಡೆಸಿ, ನಿವೇಶನ ಹಂಚಿಕೆಗೆ ಅಗತ್ಯ ಕ್ರಮ ಕೈಗೊಂಡು ಲಿಖಿತ ಭರವಸೆ ನೀಡಬೇಕು. ಅಲ್ಲಿಯವರೆಗೆ ಗ್ರಾಮ ಪಂಚಾಯಿತಿ ಕಾರ್ಯಾಲಯದ ಮುಂಭಾಗ ಆರಂಭಿಸಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹವನ್ನು ಕೈಬಿಡುವುದಿಲ್ಲ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಧರಣಿಯಲ್ಲಿ ಆರ್. ಮಾನಸಯ್ಯ, ಆದೇಶ ನಗನೂರು, ಚಿದಾನಂದ ಕಸಬಾವಿ, ಲಿಂಗಸುಗೂರು ಎಐಕೆಕೆಎಸ್ ಗ್ರಾಮ ಸಮಿತಿ ಅಧ್ಯಕ್ಷ ಕಾಮ್ರೇಡ್ ಯಲ್ಲಪ್ಪ, ಉಪಾಧ್ಯಕ್ಷೆ ಶಾಂಭವಿ, ಕಾರ್ಯದರ್ಶಿ ಚಂದಸಾಬ್, ಸಹ ಕಾರ್ಯದರ್ಶಿ ಅಮರೇಶ ಸೇರಿದಂತೆ ನೂರಾರು ಬಡ ಕೂಲಿಕಾರರು ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಸ್ಥಳೀಯ ತಹಶೀಲ್ದಾರ್ ಅವರಿಗೆ ಬರೆದ ಮನವಿ ಪತ್ರವನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸಲಾಯಿತು.

# ಅಂಚೆ ಇಲಾಖೆಯಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 02 (ಕರ್ನಾಟಕ ವಾರ್ತೆ): ಭಾರತೀಯ ಅಂಚೆ ಇಲಾಖೆಯು ಶಾಲಾ ಮಕ್ಕಳಲ್ಲಿ ಅಂಚೆ ಚೀಟಿ ಸಂಗ್ರಹಣಾ ಕಲೆಯನ್ನು ಉತ್ತೇಜಿಸಲು ದೀನ್ ದಯಾಳ್ ಸ್ಪರ್ಶ್ ಯೋಜನೆ ಯಡಿಯಲ್ಲಿ ವಿದ್ಯಾರ್ಥಿ ವೇತನಕ್ಕಾಗಿ 6ನೇ ತರಗತಿಯಿಂದ 9ನೇ ತರಗತಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ರಾಯಚೂರು ಅಂಚೆ ಇಲಾಖೆ ಅಧೀಕ್ಷಕರು ತಿಳಿಸಿದ್ದಾರೆ.

ಸ್ಪರ್ಷ ಎಂದರೆ ಸ್ಟಾಂಪ್‌ಗಳಲ್ಲಿ ಅಭಿರುಚಿ ಮತ್ತು ಸಂಶೋಧನೆಯನ್ನು ಹವ್ಯಾಸವಾಗಿ ಉತ್ತೇಜಿಸಲು, ಶೈಕ್ಷಣಿಕ ಪಠ್ಯಕ್ರಮವನ್ನು ಬಲಪಡಿಸುವ ಮತ್ತು ಪೂರಕವಾಗುವಂತೆ ಚಿಕ್ಕ ವಯಸ್ಸಿನ ಮಕ್ಕಳಲ್ಲಿ ಅಂಚೆ ಚೀಟಿಗಳ ಸಂಗ್ರಹವನ್ನು ಉತ್ತೇಜಿಸುವುದು ಈ ವಿದ್ಯಾರ್ಥಿವೇತನದ ಉದ್ದೇಶವಾಗಿದೆ.

ಈ ಹವ್ಯಾಸವು ವಿಶ್ರಾಂತಿ ಮತ್ತು ಒತ್ತಡ ನಿವಾರಿಸಲು ಸಹಾಯ ಮಾಡುತ್ತದೆ. ಯೋಜನೆಯಡಿಯಲ್ಲಿ 2025-26 ಶೈಕ್ಷಣಿಕ ವರ್ಷದಲ್ಲಿ 60 ಅಂಕಗಳನ್ನು ಹೊಂದಿರುವ ಮತ್ತು ಅಂಚೆ ಚೀಟಿಗಳ ಸಂಗ್ರಹದ ಠೇವಣಿ ಖಾತೆ, ಫಿಲಾಟೆಲಿಕ್ ಕ್ಲಬ್‌ನ ಸದಸ್ಯ ಮತ್ತು ಅಂಚೆ ಚೀಟಿ ಸಂಗ್ರಹವನ್ನು ಹವ್ಯಾಸವಾಗಿ ಮುಂದುವರಿಸುವ 6 ರಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ 6000 ರೂ. ವಿದ್ಯಾರ್ಥಿವೇತನ ನೀಡಲಾಗುತ್ತದೆ.

ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಅಂಚೆ ಇಲಾಖೆಯು ನೀಡುವ ಅಂಚೆ ಚೀಟಿಗಳ ಸಂಗ್ರಹ ಯೋಜನೆಯಲ್ಲಿ ಯಶಸ್ವಿಯಾಗಿ ಸ್ಪರ್ಧಿಸಬೇಕಾಗುತ್ತದೆ.

ಹಂತ-1 ಅಂಚೆ ಚೀಟಿಗಳ ಸಂಗ್ರಹದ ರಸ ಪ್ರಶ್ನೆಯಲ್ಲಿ ಭಾಗವಹಿಸಲು ಸೆಪ್ಟೆಂಬರ್ 10 ರ ಒಳಗೆ ಅರ್ಜಿ ಸಲ್ಲಿಸಬೇಕು.

ಕರ್ನಾಟಕದ ಎಲ್ಲ ಶಾಲೆಗಳು ತಮ್ಮ ವಿದ್ಯಾರ್ಥಿಗಳನ್ನು ವಿದ್ಯಾರ್ಥಿವೇತನ ಯೋಜನೆಯಲ್ಲಿ ಭಾಗವಹಿಸಲು ಪ್ರೋತ್ಸಾಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಿತಿತಿ.ಟಿಜಚಿರಿಣ..ಟಿ ಮತ್ತು ತಿತಿತಿ. ಇಚಿಡಿಟಿಚಿಣಚಿಞಚಿರಿಣ..ಟಿಗೆ ಭೇಟಿ ನೀಡಿ ಎಂದು ರಾಯಚೂರು ಅಂಚೆ ಇಲಾಖೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನು ಮಂತ್ರಾಲಯದಲ್ಲಿ ಮಹಾ ರಥೋತ್ಸವಕ್ಕೆ ಶ್ರೀ ಸುಬುಧೇಂದ್ರ ತೀರ್ಥರಿಂದ ಚಾಲನೆ

ನೆರವೇರಿತು. ಭಕ್ತರು ಶ್ರೀ ರಾಯರ ನಾಮಸ್ಮರಣೆ ಮಾಡುತ್ತಾ ರಥೋತ್ಸವದಲ್ಲಿ ಭಾಗವಹಿಸಿ ಪುನೀತರಾದರು. ರಥೋತ್ಸವದ ಹಿನ್ನೆಲೆಯಲ್ಲಿ ಮಠದ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಧಾರ್ಮಿಕ ಸಂಭ್ರಮ ಮನೆಮಾಡಿತ್ತು.

ಬಳಿಕ ಭಕ್ತರನ್ನು ಉದ್ದೇಶಿಸಿ ಅನುಗ್ರಹ ಸಂದೇಶ ನೀಡಿದ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು, ಶ್ರೀ ರಾಘವೇಂದ್ರ ಸ್ವಾಮಿಗಳ ಮೇಲಿನ ಅಚಲ ಭಕ್ತಿ, ಗುರುಗಳ ಸ್ಮರಣೆ ಹಾಗೂ ಧರ್ಮಾಚರಣೆಯಿಂದ ಜೀವನದಲ್ಲಿ ಶಾಂತಿ, ನೆಮ್ಮದಿ ಮತ್ತು ಸದ್ಗತಿ ದೊರೆಯುತ್ತದೆ ಎಂದು ಆಶೀರ್ವಚನ ನೀಡಿದರು.

ಶ್ರೀ ರಾಯರ ಅನುಗ್ರಹವು ಸಮಸ್ತ ಭಕ್ತರ ಮೇಲಿರಲಿ, ಎಲ್ಲರ ಕುಟುಂಬಗಳಲ್ಲಿ ಸುಖ, ಶಾಂತಿ, ಆರೋಗ್ಯ ಮತ್ತು ಸಮೃದ್ಧಿ ನೆಲೆಸಲಿ ಎಂದು ಶ್ರೀಪಾದಂಗಳವರು ಪ್ರಾರ್ಥಿಸಿದರು. ಭಕ್ತರು ಸತ್ಸಂಗ, ಸೇವೆ, ದಾನ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡು ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಕೊನೆಯಲ್ಲಿ ಶ್ರೀಪಾದಂಗಳವರು ಭಕ್ತರಿಗೆ ಫಲಮಂತ್ರಾಕ್ಷತೆ ವಿತರಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ದಿವ್ಯ ಅನುಗ್ರಹವನ್ನು ಕರುಣಿಸಿದರು. ಶ್ರೀಪಾದಂಗಳವರಿಂದ ಫಲಮಂತ್ರಾಕ್ಷತೆ ಸ್ವೀಕರಿಸಿದ ಭಕ್ತರು ಭಕ್ತಿಭಾವದಿಂದ ಆಶೀರ್ವಾದ ಪಡೆದುಕೊಂಡರು.

ಮಹಾ ರಥೋತ್ಸವದಲ್ಲಿ ಶ್ರೀಮಠದ ಅಧಿಕಾರಿಗಳು, ಪಂಡಿತರು, ಅರ್ಚಕರು, ಸಿಬ್ಬಂದಿ ಹಾಗೂ ವಿವಿಧೆಡೆಯಿಂದ ಆಗಮಿಸಿದ್ದ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ಶ್ರೀ ರಾಯರ ಕೃಪೆಗೆ ಪಾತ್ರರಾದರು.

## ಮೊದಲನೇ ಪುಟದಿಂದ

# ನಿವೃತ್ತ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾಗೆ ಮಹತ್ವದ ಹೊಣೆ

ಅವರು ಫೈಟರ್ ಸ್ಕ್ವಾಡ್ರನ್‌ನ ಕಮಾಂಡಿಂಗ್ ಆಫೀಸರ್ ಆಗಿ ಸೇವೆ ಸಲ್ಲಿಸಿದ್ದಾರೆ. ಯುದ್ಧವಿಮಾನ ಘಟಕದ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸುವುದು ಕಾರ್ಯಾಚರಣಾತ್ಮಕ ಸಿದ್ಧತೆ, ಪೈಲಟ್‌ಗಳ ತರಬೇತಿ, ವಿಮಾನಗಳ ನಿರ್ವಹಣೆ ಹಾಗೂ ತುರ್ತು ಸಂದರ್ಭಗಳಲ್ಲಿ ಕಾರ್ಯಾಚರಣೆ ನಡೆಸುವ ಮಹತ್ವದ ಹೊಣೆಗಾರಿಕೆಯನ್ನು ಒಳಗೊಂಡಿರುತ್ತದೆ.

ಇದಲ್ಲದೆ, ಭಾರತೀಯ ವಾಯುಪಡೆಯ ವಿಮಾನ ಹಾಗೂ ವಿವಿಧ ವ್ಯವಸ್ಥೆಗಳ ಪರೀಕ್ಷೆಯಲ್ಲಿ ಪ್ರಮುಖ ಪಾತ್ರವಹಿಸುವ ಏರ್‌ಕ್ರಾಫ್ಟ್ ಅಂಡ್ ಸಿಸ್ಟಮ್ಸ್ ಟೆಸ್ಟಿಂಗ್ ಎಸ್ಟಾಬ್ಲಿಷ್ಮೆಂಟ್ (ASTE)ನಲ್ಲಿ ಮುಖ್ಯ ಪರೀಕ್ಷಾ ಪೈಲಟ್ ಆಗಿಯೂ ಅವರು ಸೇವೆ ಸಲ್ಲಿಸಿದ್ದಾರೆ. ಹೊಸ ವಿಮಾನಗಳು, ತಂತ್ರಜ್ಞಾನಗಳು ಹಾಗೂ ರಕ್ಷಣಾ ವ್ಯವಸ್ಥೆಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸುವಂತಹ ಅತ್ಯಂತ ಸೂಕ್ಷ್ಮ ಮತ್ತು ತಾಂತ್ರಿಕ ಜವಾಬ್ದಾರಿಯನ್ನು ಅವರು ನಿರ್ವಹಿಸಿದ್ದಾರೆ.

ಜೀತೇಂದ್ರ ಮಿಶ್ರಾ ಅವರು ಎರಡು ಪ್ರಮುಖ ವಾಯುನೆಲೆಗಳ ಏರ್ ಆಫೀಸರ್ ಕಮಾಂಡಿಂಗ್ ಆಗಿಯೂ ಕಾರ್ಯನಿರ್ವಹಿಸಿದ್ದಾರೆ. ವಾಯುನೆಲೆಗಳ ಕಾರ್ಯಾಚರಣಾತ್ಮಕ ಸಿದ್ಧತೆ, ಭದ್ರತೆ, ಮಾನವ ಸಂಪನ್ಮೂಲ ನಿರ್ವಹಣೆ ಹಾಗೂ ವಿಮಾನ ಕಾರ್ಯಾಚರಣೆಗಳ ಸಮನ್ವಯದಂತಹ ಮಹತ್ವದ ಹೊಣೆಗಾರಿಕೆಗಳನ್ನು ಅವರು ಯಶಸ್ವಿಯಾಗಿ ನಿಭಾಯಿಸಿದ್ದಾರೆ.

ವಾಯುಪಡೆಯ ಪ್ರಧಾನ ಕಚೇರಿಯಲ್ಲಿಯೂ ಹಲವು ಮಹತ್ವದ ಹುದ್ದೆಗಳನ್ನು ಅಲಂಕರಿಸಿರುವ ಅವರು, ನಿರ್ದೇಶಕರಾಗಿ, ಪ್ರಿನ್ಸಿಪಾಲ್ ಡೈರೆಕ್ಟರ್ (ASR) ಆಗಿ ಹಾಗೂ ಸಹಾಯಕ ವಾಯುಪಡೆ ಮುಖ್ಯಸ್ಥ (ಯೋಜನೆಗಳು) ಆಗಿ ಕಾರ್ಯನಿರ್ವಹಿಸಿದ್ದಾರೆ. ಈ ಹುದ್ದೆಗಳಲ್ಲಿ ಭಾರತೀಯ ವಾಯುಪಡೆಯ ಭವಿಷ್ಯದ ಕಾರ್ಯತಂತ್ರ, ಸಾಮರ್ಥ್ಯ ವೃದ್ಧಿ, ಆಧುನೀಕರಣ ಹಾಗೂ ಯೋಜನೆಗಳ ರೂಪುರೇಷೆ ಸಿದ್ಧಪಡಿಸುವ ಕಾರ್ಯಗಳಲ್ಲಿ ತಮ್ಮ ಅನುಭವವನ್ನು ಬಳಸಿಕೊಂಡಿದ್ದಾರೆ.

ನಂತರ ಏರ್‌ಕ್ರಾಫ್ಟ್ ಅಂಡ್ ಸಿಸ್ಟಮ್ಸ್ ಟೆಸ್ಟಿಂಗ್ ಎಸ್ಟಾಬ್ಲಿಷ್ಮೆಂಟ್‌ನ ಕಮಾಂಡೆಂಟ್ ಆಗಿ ಜವಾಬ್ದಾರಿ ವಹಿಸಿಕೊಂಡ ಅವರು, ವಿಮಾನ ಮತ್ತು ರಕ್ಷಣಾ ತಂತ್ರಜ್ಞಾನಗಳ ಪರೀಕ್ಷಾ ಚಟುವಟಿಕೆಗಳಿಗೆ ನೇತೃತ್ವ ನೀಡಿದ್ದಾರೆ.

ಉನ್ನತ ರಕ್ಷಣಾ ವ್ಯವಸ್ಥೆಯಲ್ಲಿಯೂ ಮಿಶ್ರಾ ಅವರು ಪ್ರಮುಖ ಪಾತ್ರವಹಿಸಿದ್ದು, ಇಂಟಿಗ್ರೇಟೆಡ್ ಡಿಫೆನ್ಸ್ ಸ್ಟಾಫ್‌ನ ಉಪಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ್ದಾರೆ. ಸೇನೆ, ನೌಕಾಪಡೆ ಹಾಗೂ ವಾಯುಪಡೆ ನಡುವಿನ ಸಮನ್ವಯ, ಜಂಟಿ ರಕ್ಷಣಾ ಯೋಜನೆಗಳು ಮತ್ತು ಕಾರ್ಯತಂತ್ರ ರೂಪಿಸುವಿಕೆಯಲ್ಲಿ ಈ ಹುದ್ದೆಗೆ ವಿಶೇಷ ಮಹತ್ವವಿದೆ. ಪಶ್ಚಿಮ ವಾಯು ಕಮಾಂಡ್‌ನ ಮುಖ್ಯಸ್ಥರಾಗಿ ಜವಾಬ್ದಾರಿ ವಹಿಸಿಕೊಳ್ಳುವುದಕ್ಕೂ ಮುನ್ನ ಅವರು ಈ ಹುದ್ದೆಯಲ್ಲಿ ಸೇವೆ ಸಲ್ಲಿಸಿದ್ದರು.

ಪಶ್ಚಿಮ ವಾಯು ಕಮಾಂಡ್‌ನ ಏರ್ ಆಫೀಸರ್ ಕಮಾಂಡಿಂಗ್-ಇನ್-ಚೀಫ್ ಆಗಿದ್ದ ಅವಧಿಯಲ್ಲಿ ದೇಶದ ಪಶ್ಚಿಮ ಗಡಿಭಾಗದ ವಾಯು ರಕ್ಷಣಾ ಕಾರ್ಯಾಚರಣೆಗಳ ಮೇಲ್ವಿಚಾರಣೆಯಂತಹ ಮಹತ್ವದ ಹೊಣೆಗಾರಿಕೆ ಅವರ ಮೇಲಿತ್ತು. ಆಪರೇಷನ್ ಸಿಂಧೂರ್ ನಡೆದ ಸಂದರ್ಭದಲ್ಲಿಯೂ ಅವರು ಪಶ್ಚಿಮ ಕಮಾಂಡ್‌ನ ಮುಖ್ಯಸ್ಥರಾಗಿದ್ದರು ಎಂಬುದು ಅವರ ವೃತ್ತಿಜೀವನದ ಪ್ರಮುಖ ಘಟ್ಟಗಳಲ್ಲಿ ಒಂದಾಗಿದೆ.

ಭಾರತೀಯ ವಾಯುಪಡೆಗೆ ಸಲ್ಲಿಸಿದ ಸುದೀರ್ಘ ಹಾಗೂ ವಿಶಿಷ್ಟ ಸೇವೆಯನ್ನು ಗುರುತಿಸಿ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾ ಅವರಿಗೆ ಅತಿ ವಿಶಿಷ್ಟ ಸೇವಾ ಪದಕ ಹಾಗೂ ವಿಶಿಷ್ಟ ಸೇವಾ ಪದಕ ನೀಡಿ ಗೌರವಿಸಲಾಗಿದೆ.

ಸುಮಾರು ನಾಲ್ಕು ದಶಕಗಳ ಸೇನಾ ಸೇವೆಯಲ್ಲಿ ಯುದ್ಧವಿಮಾನ ಕಾರ್ಯಾಚರಣೆಗಳಿಂದ ಹಿಡಿದು ವಿಮಾನ ಪರೀಕ್ಷೆ, ವಾಯುನೆಲೆಗಳ ಕಮಾಂಡ್, ರಕ್ಷಣಾ ಯೋಜನೆ ಹಾಗೂ ಉನ್ನತ ಮಟ್ಟದ ಸೇನಾ ಸಮನ್ವಯದವರೆಗೆ ಹಲವು ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಜೀತೇಂದ್ರ ಮಿಶ್ರಾ ಅವರು ಭಾರತೀಯ ವಾಯುಪಡೆಯ ಅನುಭವಿ ಮತ್ತು ಹಿರಿಯ ಅಧಿಕಾರಿಗಳಲ್ಲಿ ಒಬ್ಬರಾಗಿ ಗುರುತಿಸಿಕೊಂಡಿದ್ದಾರೆ.

# ಭಾರತ್‌ಮಾಲಾ ಹೆದ್ದಾರಿ ಕಾಮಗಾರಿ ಪರಿಶೀಲಿಸಿದ ಸಂಸದ

ಮಾಹಿತಿ ದೊರೆಯುವಂತೆ ಸೂಕ್ತ ಸೂಚನಾ ಫಲಕಗಳನ್ನು ಅಳವಡಿಸಬೇಕು. ಅಲ್ಲದೆ, ರಸ್ತೆ ಸುರಕ್ಷತೆಗೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಹೆದ್ದಾರಿ ಕಾಮಗಾರಿಯಿಂದ ರೈತರ ಜಮೀನುಗಳಿಗೆ ತೆರಳುವ ಹಾಲಿ ದಾರಿಗಳು ಬಂದ್ ಆಗದಂತೆ ನೋಡಿಕೊಳ್ಳಬೇಕು. ಅನಿವಾರ್ಯ ಸಂದರ್ಭಗಳಲ್ಲಿ ಪರ್ಯಾಯ ಮಾರ್ಗಗಳನ್ನು ಕಲ್ಪಿಸಬೇಕು. ಮಳೆಗಾಲದಲ್ಲಿ ರಸ್ತೆಯ ಮೇಲೆ ಹಾಗೂ ಅಕ್ಕಪಕ್ಕದ ಪ್ರದೇಶಗಳಲ್ಲಿ ನೀರು ನಿಲ್ಲದಂತೆ ಸಮರ್ಪಕ ಚರಂಡಿ ಮತ್ತು ನೀರು ಹರಿದು ಹೋಗುವ ವ್ಯವಸ್ಥೆ ನಿರ್ಮಿಸಬೇಕು ಎಂದು ಸೂಚಿಸಿದರು.

ಕಾಮಗಾರಿಯಲ್ಲಿ ಬಳಸುವ ಸಾಮಗ್ರಿಗಳ ಗುಣಮಟ್ಟದಲ್ಲಿ ಯಾವುದೇ ರೀತಿಯ ರಾಜಿ ಮಾಡಿಕೊಳ್ಳಬಾರದು. ನಿಗದಿತ ತಾಂತ್ರಿಕ ಮಾನದಂಡಗಳನ್ನು ಕಡ್ಡಾಯವಾಗಿ ಪಾಲಿಸಿ, ಗುಣಮಟ್ಟ ಕಾಯ್ದುಕೊಳ್ಳುವುದರೊಂದಿಗೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸಂಸದರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಹೆದ್ದಾರಿ ಕಾಮಗಾರಿಯಿಂದ ಸ್ಥಳೀಯ ಜನರು ಹಾಗೂ ರೈತರಿಗೆ ಎದುರಾಗಬಹುದಾದ ಸಮಸ್ಯೆಗಳನ್ನು ಅಧಿಕಾರಿಗಳು ಸ್ಥಳದಲ್ಲಿಯೇ ಪರಿಶೀಲಿಸಿ, ಅವುಗಳಿಗೆ ಶಾಶ್ವತ ಪರಿಹಾರ ಒದಗಿಸಬೇಕು. ಕಾಮಗಾರಿಯ ಪ್ರಗತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಿ, ಅನಗತ್ಯ ವಿಳಂಬಕ್ಕೆ ಅವಕಾಶ ನೀಡದೆ ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ತಿಳಿಸಿದರು.

ನಂತರ ಎನ್‌ಎಚ್‌ಎಐ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಂಸದರು, ಹೆದ್ದಾರಿ ಕಾಮಗಾರಿಯ ವಿವಿಧ ಹಂತಗಳು, ಬಾಕಿ ಉಳಿದಿರುವ ಕೆಲಸಗಳು ಹಾಗೂ ಸ್ಥಳೀಯವಾಗಿ ಎದುರಾಗುತ್ತಿರುವ ಸಮಸ್ಯೆಗಳ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ಎನ್‌ಎಚ್‌ಎಐ ಯೋಜನಾ ನಿರ್ದೇಶಕರು, ಪ್ಲಾನಿಂಗ್ ಮ್ಯಾನೇಜರ್, ಸಂಬಂಧಪಟ್ಟ ಅಧಿಕಾರಿಗಳು, ಕಾಮಗಾರಿ ಗುತ್ತಿಗೆ ಸಂಸ್ಥೆಯ ಪ್ರತಿನಿಧಿಗಳು, ಸ್ಥಳೀಯ ಮುಖಂಡರು, ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಜಿಲ್ಲೆಯ ಕೊಲೆ-ಅತ್ಯಾಚಾರ ಪ್ರಕರಣಗಳಿಗೆ ಕಠಿಣ ಕ್ರಮಕ್ಕೆ ಆಗ್ರಹ

ಕುಟುಂಬಗಳಿಗೆ ನ್ಯಾಯ ದೊರಕಿಸುವುದರೊಂದಿಗೆ ಸರ್ಕಾರದಿಂದ ಅಗತ್ಯ ಪರಿಹಾರ ಹಾಗೂ ನೆರವು ಒದಗಿಸಬೇಕು ಎಂದು ನಿಯೋಗವು ಸಚಿವರಿಗೆ ಮನವಿ ಮಾಡಿತು. ಈಕುರಿತುಪ್ರತಿಕ್ರಿಯಿಸಿದಸಮಾಜಕಲ್ಯಾಣಸಚಿವಕೆ.ಎಚ್.ಮುನಿಯಪ್ಪ,ರಾಯಚೂರುಜಿಲ್ಲೆಯಲ್ಲಿನಡೆದಿರುವಕೊಲೆ ಹಾಗೂಅತ್ಯಾಚಾರಪ್ರಕರಣಗಳನ್ನುಸರ್ಕಾರಗಂಭೀರವಾಗಿಪರಿಗಣಿಸಿದೆ.ಪ್ರಕರಣಗಳಕುರಿತುಉನ್ನತಮಟ್ಟದತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಶೀಘ್ರದಲ್ಲೇ ರಾಯಚೂರು ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮಾನ್ವಿ ಶಾಸಕ ಹಂಪಯ್ಯ ನಾಯಕ, ಮಸ್ಕಿ ಶಾಸಕ ಬಸನಗೌಡ ತುರವಿಹಾಳ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಕಾಂಗ್ರೆಸ್ ರಾಜ್ಯ ಯುವ ಮುಖಂಡ ರವಿ ಬೋಸರಾಜು, ಲಿಂಗಸುಗೂರಿನ ಮಾಜಿ ಶಾಸಕ ಡಿ.ಎಸ್. ಹುಲಗೇರಿ ಸೇರಿದಂತೆ ಜಿಲ್ಲೆಯ ಹಲವು ಮುಖಂಡರು ಉಪಸ್ಥಿತರಿದ್ದರು.

# ಬ್ರಹ್ಮಶ್ರೀ ನಾರಾಯಣ ಗುರುಗಳ ಆದರ್ಶಗಳನ್ನು ಮಕ್ಕಳಲ್ಲಿ ಬೆಳೆಸಿ: ತಹಶೀಲ್ದಾರ್ ಸುರೇಶ ವರ್ಮಾ

ಬಂದವರು ಬ್ರಹ್ಮಶ್ರೀ ನಾರಾಯಣ ಗುರುಗಳು ಆಗಿದ್ದಾರೆ ಎಂದು ಹೇಳಿದರು.

ಆ ಕಾಲದಲ್ಲಿ ಕೆಳಜಾತಿಯವರಿಗೆ ದೇವಾಲಯ ಪ್ರವೇಶ ಸೇರಿದಂತೆ ಹಲವು ಸಾಮಾಜಿಕ ಅವಕಾಶಗಳು ನಿರಾಕರಿಸಲ್ಪಟ್ಟಿದ್ದವು. ಮಹಿಳೆಯರು ಶಿಕ್ಷಣದಿಂದ ವಂಚಿತರಾಗಿದ್ದರು. ಇಂತಹ ಅಸಮಾನತೆ ಮತ್ತು ದಮನದ ವ್ಯವಸ್ಥೆಯ ವಿರುದ್ಧ ನಾರಾಯಣ ಗುರುಗಳು ಹೋರಾಡಿ, ಶಿಕ್ಷಣ, ಜಾಗೃತಿ ಹಾಗೂ ಒಗ್ಗಟ್ಟಿನ ಮಹತ್ವವನ್ನು ಸಾರಿದರು ಎಂದರು.

ಒದೇ ದೇವರು, ಒಂದೇ ಧರ್ಮ, ಒಂದೇ ಜಾತಿ ಎಂಬ ಸಮಾನತೆಯ ಸಂದೇಶದ ಮೂಲಕ ಸಮಾಜದಲ್ಲಿ ಮಾನವೀಯತೆ ಮತ್ತು ಸಹೋದರತ್ವದ ಭಾವನೆ ಮೂಡಿಸಿದವರು ನಾರಾಯಣ ಗುರುಗಳು. ಅವರು ತಮ್ಮ ಜೀವನದಲ್ಲಿಯೇ ಈ ತತ್ವಗಳನ್ನು ಅನುಸರಿಸಿ ಸಮಾಜಕ್ಕೆ ಮಾದರಿಯಾದರು ಎಂದರು.

ಅದಿನ ಸಾಮಾಜಿಕ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತುವುದು ಸುಲಭದ ಕೆಲಸವಾಗಿರಲಿಲ್ಲ. ಆದರೂ ನಾರಾಯಣ ಗುರುಗಳು ಧೈರ್ಯದಿಂದ ಅಸಮಾನತೆ ಹಾಗೂ ಮೌಢ್ಯದ ವಿರುದ್ಧ ಹೋರಾಡಿ, ಸಮಾಜ ಸುಧಾರಣೆಗೆ ಮಾರ್ಗದರ್ಶಕರಾದರು. ಅವರ ಪಾಂಡಿತ್ಯ, ಅಧ್ಯಯನ ಹಾಗೂ ವಿವಿಧ ಧರ್ಮಗಳ ವಿಚಾರಗಳ ಮೇಲಿನ ಜ್ಞಾನವು ಅವರ ಚಿಂತನೆಗೆ ಮತ್ತಷ್ಟು ಬಲ ನೀಡಿತ್ತು ಎಂದು ಹೇಳಿದರು.

ಉಪನ್ಯಾಸಕರಾಗಿ ಗಂಗಾವತಿ ವಕೀಲರಾದ ನಾಗರಾಜ ಎಸ್. ಅವರು ಮಾತನಾಡಿ, ನಾರಾಯಣ ಗುರುಗಳ ಜಯಂತಿಯನ್ನು ಆಚರಿಸುವುದರ ನಿಜವಾದ ಉದ್ದೇಶ ಅವರ ವಿಚಾರಧಾರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವುದಾಗಿದೆ. ಸಮಾನತೆ, ಶಿಕ್ಷಣ, ಮಾನವೀಯತೆ ಹಾಗೂ ಸಹೋದರತ್ವದ ಸಂದೇಶವನ್ನು ಸಮಾಜದಲ್ಲಿ ಬಲಪಡಿಸುವ ಮೂಲಕ ನಾರಾಯಣ ಗುರುಗಳಿಗೆ ಗೌರವ ಸಲ್ಲಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಮುರುಳಿಧರ ರಾವ್, ಪಾಲಿಕೆಯ ವ್ಯವಸ್ಥಾಪಕ ರಾಜು, ಮುಖಂಡರಾದ ಕೆ.ಶಾಂತಪ್ಪ, ಚನ್ನಣ್ಣ ಗೌಡ, ಜಿ.ಶಿವಮೂರ್ತಿ, ತಿಮ್ಮಪ್ಪ ನಾಡಗೌಡ, ಮಂಜುನಾಥ ಹಾನಗಲ್, ಸಮಾಜದ ಮುಖಂಡರಾದ ಎಂ.ನರಸನಗೌಡ, ನಾರಾಯಣ ರಾವ್, ರಾಮಕೃಷ್ಣ, ರಾಚನಗೌಡ, ಅಶೋಕ ಚಾಗಬಾವಿ, ಅನಂತರಾಜು, ಪರಶುರಾಮ ಗೌಡ, ಈರಪ್ಪಗೌಡ, ತಾಯಣ್ಣ ಗೌಡ, ಹನುಮಂತಗೌಡ, ರಂಗನಾಥ, ಶ್ರೀನಿವಾಸಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮೆರವಣಿಗೆಗೆ ಚಾಲನೆ: ರಾಯಚೂರಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಹಿನ್ನೆಲೆಯಲ್ಲಿ ನಗರದ ಮಹಿಳಾ ಸಮಾಜದ ಮುಂಭಾಗದ ಆರ್ಯ ಈಡಿಗ ಸಮಾಜದ ಕಾರ್ಯಾಲಯದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಭಾವಚಿತ್ರಕ್ಕೆ ವಿವಿಧ ಗಣ್ಯರಿಂದ ಪೂಜಾ ಸಲ್ಲಿಸಿ, ಮೆರವಣಿಗೆ ಚಾಲನೆ ನೀಡಿದರು.

ಮೆರವಣಿಗೆಯು ರಾಯಚೂರು ಮಹಾನಗರ ಪಾಲಿಕೆ, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ರಂಗಮದಿರಕ್ಕೆ ಬಂದು ಸೇರಿತು.

ಇದೇ ಸಂದರ್ಭದಲ್ಲಿ ತಹಶಿಲ್ದಾರ್ ಸುರೇಶ ವರ್ಮಾ, ಮುಖಂಡರಾದ ಕೆ.ಶಾಂತಪ್ಪ, ಜಿಂದಪ್ಪ, ನರಸಿಂಹಲು ಮಾಡಗಿರಿ, ರವಿ ಪಾಟೀಲ್ ಸೇರಿದಂತೆ ಸಮಾಜ ಮುಖಂಡರು ಸೇರಿದಂತೆ ಇತರರು ಇದ್ದರು.

## ಶ್ರೀಮಠದ ಸಿಬ್ಬಂದಿಯಿಂದ ಗುರು ವಂದನೆ, ಅಶ್ವವಾಹನೋತ್ಸವ ವೈಭವ




ಮಂತ್ರಾಲಯ: ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವದ ಪವಿತ್ರ ಸಂದರ್ಭದಲ್ಲಿ ಶ್ರೀ ರಾಘವೇಂದ್ರಸ್ವಾಮಿ ಮಠದ ಸಿಬ್ಬಂದಿ ವರ್ಗದವರು ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರಿಗೆ ಗುರು ವಂದನೆ ಸಲ್ಲಿಸಿ ತಮ್ಮ ಭಕ್ತಿ, ಕೃತಜ್ಞತೆ ಹಾಗೂ ಗೌರವವನ್ನು ವ್ಯಕ್ತಪಡಿಸಿದರು.

ಶ್ರೀಮಠದ ಸಿಬ್ಬಂದಿಯ ವೇತನವನ್ನು ಹೆಚ್ಚಿಸಿರುವ ಹಿನ್ನೆಲೆಯಲ್ಲಿ, ಶ್ರೀಪಾದಂಗಳವರ ಅನುಗ್ರಹ ಹಾಗೂ ಆಶೀರ್ವಾದಕ್ಕೆ ಕೃತಜ್ಞತೆ ಸಲ್ಲಿಸುವ ಉದ್ದೇಶದಿಂದ ಸಿಬ್ಬಂದಿ ವರ್ಗದವರು ವಿಶೇಷವಾಗಿ ಗುರು ವಂದನೆ ಕಾರ್ಯಕ್ರಮ ನೆರವೇರಿಸಿದರು. ಶ್ರೀಮಠದ ಸೇವೆಯಲ್ಲಿ ತೊಡಗಿಸಿಕೊಂಡಿರುವ ಸಿಬ್ಬಂದಿ, ಶ್ರೀಪಾದಂಗಳವರ ಮಾರ್ಗದರ್ಶನ ಮತ್ತು ಆಶೀರ್ವಾದದಿಂದ ಸೇವೆ ಸಲ್ಲಿಸುತ್ತಿರುವುದು ತಮ್ಮ ಭಾಗ್ಯವೆಂದು ಭಾವಿಸಿ ಭಕ್ತಿಭಾವದಿಂದ ನಮಸ್ಕರಿಸಿದರು.

ಈ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಸಿಬ್ಬಂದಿಗೆ ಆಶೀರ್ವಾದ ನೀಡಿ, ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಸೇವೆಯಲ್ಲಿ ಶ್ರದ್ಧೆ, ನಿಷ್ಠೆ ಮತ್ತು ಸಮರ್ಪಣಾ ಭಾವದಿಂದ ಮುಂದುವರಿಯುವಂತೆ ಅನುಗ್ರಹಿಸಿದರು.

ಇದೇ ವೇಳೆ ಅಹೋಬಿಲಂನ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದ ಅಧಿಕಾರಿಗಳು ಹಾಗೂ ಅರ್ಚಕರು ಶ್ರೀಕ್ಷೇತ್ರ ಮಂತ್ರಾಲಯಕ್ಕೆ ಆಗಮಿಸಿ, ದೇವಾಲಯದಿಂದ ತರಲಾದ ಪವಿತ್ರ ಶೇಷವಸ್ತ್ರ ಹಾಗೂ ಪ್ರಸಾದವನ್ನು ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರಿಗೆ ಸಮರ್ಪಿಸಿದರು. ಶ್ರೀಪಾದಂಗಳವರು ಶೇಷವಸ್ತ್ರ ಮತ್ತು ಪ್ರಸಾದವನ್ನು ಭಕ್ತಿಭಾವದಿಂದ ಸ್ವೀಕರಿಸಿ, ಆಗಮಿಸಿದ ಅಧಿಕಾರಿಗಳು ಹಾಗೂ ಅರ್ಚಕರಿಗೆ ಆಶೀರ್ವಾದ ನೀಡಿದರು.

ನಂತರ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಶ್ರೀಮಠದ ಪೂಜಾ ಮಂದಿರದಲ್ಲಿ ಶ್ರೀ ಬ್ರಹ್ಮ ಕರಾರ್ಚಿತ ಮೂಲರಾಮದೇವರ ಪೂಜೆಯನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿದರು. ವೇದಘೋಷ, ಮಂತ್ರಪಠಣ ಹಾಗೂ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ನಡೆದ ಪೂಜೆಯಲ್ಲಿ ಶ್ರೀಮಠದ ಪಂಡಿತರು, ಅರ್ಚಕರು ಹಾಗೂ ಭಕ್ತರು ಪಾಲ್ಗೊಂಡರು.

ಮೂಲರಾಮದೇವರ ಪೂಜೆಯ ಬಳಿಕ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಮೂಲ ಬೃಂದಾವನಕ್ಕೆ ಮಹಾಮಂಗಳಾರತಿ ನೆರವೇರಿಸಲಾಯಿತು. ಈ ವೇಳೆ ಭಕ್ತರು ಶ್ರೀ ರಾಯರ ದರ್ಶನ ಪಡೆದು ಮಂತ್ರಾಕ್ಷತೆ ಹಾಗೂ ಪ್ರಸಾದ ಸ್ವೀಕರಿಸಿ ಪುನೀತರಾದರು.

ಸಂಜೆಯ ವೇಳೆಗೆ ಆರಾಧನಾ ಮಹೋತ್ಸವದ ಅಂಗವಾಗಿ ಶ್ರೀ ಪ್ರಹ್ಲಾದರಾಜರ ವೈಭವದ ಅಶ್ವವಾಹನೋತ್ಸವ ಭಕ್ತಿ ಮತ್ತು ಸಂಭ್ರಮದಿಂದ ನೆರವೇರಿತು. ಅಲಂಕೃತ ಅಶ್ವವಾಹನದಲ್ಲಿ ಶ್ರೀ ಪ್ರಹ್ಲಾದರಾಜರ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ ಶ್ರೀಮಠದ ಪ್ರಾಕಾರ ಹಾಗೂ ರಾಜಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಅಶ್ವವಾಹನೋತ್ಸವದ ಸಂದರ್ಭದಲ್ಲಿ ವೇದಘೋಷ, ಭಜನೆ, ಸಂಕೀರ್ತನೆ ಹಾಗೂ ಶ್ರೀ ರಾಘವೇಂದ್ರ ಸ್ವಾಮಿಗಳ ಜಯಘೋಷಗಳು ಮೊಳಗಿದವು. ಸಾವಿರಾರು ಭಕ್ತರು ಮೆರವಣಿಗೆಯಲ್ಲಿ ಪಾಲ್ಗೊಂಡು ಶ್ರೀ ಪ್ರಹ್ಲಾದರಾಜರ ಹಾಗೂ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ದರ್ಶನ ಪಡೆದು ಆಶೀರ್ವಾದ ಸ್ವೀಕರಿಸಿದರು.

355ನೇ ಆರಾಧನಾ ಮಹೋತ್ಸವದ ಅಂಗವಾಗಿ ದಿನವಿಡೀ ನಡೆದ ವಿವಿಧ ಧಾರ್ಮಿಕ ಕಾರ್ಯಕ್ರಮಗಳಿಂದ ಶ್ರೀಕ್ಷೇತ್ರ ಮಂತ್ರಾಲಯದಲ್ಲಿ ಭಕ್ತಿ, ಶ್ರದ್ಧೆ ಮತ್ತು ಆಧ್ಯಾತ್ಮಿಕ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು.

## ಕಲ್ಯಾಣ ಕರ್ನಾಟಕದಲ್ಲಿ ದಲಿತರ ಮೇಲಿನ ದೌರ್ಜನ್ಯಕ್ಕೆ ಕಡಿವಾಣ ಹಾಕಿ: ದಮನಿತ ಸೇವಾ ಸಂಸ್ಥೆ ಆಗ್ರಹ



ರಾಯಚೂರು: ಕಲ್ಯಾಣ ಕರ್ನಾಟಕ ಭಾಗದಲ್ಲಿ ದಲಿತರ ಮೇಲೆ ದಿನೇದಿನೇ ಹೆಚ್ಚುತ್ತಿರುವ ಕೊಲೆ, ಅತ್ಯಾಚಾರ ಹಾಗೂ ದೌರ್ಜನ್ಯ ಪ್ರಕರಣಗಳಿಗೆ ಕಡಿವಾಣ ಹಾಕಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ದಮನಿತ ಸೇವಾ ಸಂಸ್ಥೆಯ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ, ಕಳೆದ ವರ್ಷ ಮಾನ್ವಿ ತಾಲೂಕಿನ ಮದ್ಲಾಪುರ ಗ್ರಾಮದ ಪ್ರಸಾದ್ ಅವರನ್ನು ಮಾರಕಾಸ್ತ್ರಗಳಿಂದ ಬರ್ಬರವಾಗಿ ಹತ್ಯೆ ಮಾಡಲಾಗಿತ್ತು. ಅದೇ ರೀತಿ 2026ರ ಆಗಸ್ಟ್ 4ರಂದು ದೇವದುರ್ಗ ತಾಲೂಕಿನ ಸುಂಕೇಶ್ವರಾಳ ಕ್ರಾಸ್‌ನಲ್ಲಿ ಭೂಮಾನಂದ ಅವರನ್ನು ಮಾರಕಾಸ್ತ್ರಗಳಿಂದ ಹತ್ಯೆ ಮಾಡಲಾಗಿದೆ ಎಂದು ಉಲ್ಲೇಖಿಸಲಾಗಿದೆ.

ಲಿಂಗಸುಗೂರು ತಾಲೂಕಿನಲ್ಲಿ ಸೌದೆ ಸಂಗ್ರಹಿಸಲು ತೆರಳಿದ್ದ ರಾಣೆಮ್ಮ ಅವರ ಮೇಲೆ ಅತ್ಯಾಚಾರ ನಡೆದಿರುವುದು ಹಾಗೂ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಅಶ್ವಿನಿ ಅವರ ಮೇಲೆ ಅತ್ಯಾಚಾರ ನಡೆಸಿ ಹತ್ಯೆ ಮಾಡಿರುವ ಘಟನೆಗಳು ನಡೆದಿವೆ. ಇಂತಹ ಪ್ರಕರಣಗಳು ಕಲ್ಯಾಣ ಕರ್ನಾಟಕ ಭಾಗದಲ್ಲಿ ಆತಂಕ ಮೂಡಿಸಿವೆ ಎಂದು ಸಂಸ್ಥೆಯ ಪದಾಧಿಕಾರಿಗಳು ತಿಳಿಸಿದ್ದಾರೆ.

ದಲಿತ ಯುವಕರ ಕೊಲೆಗಳು ಹಾಗೂ ಮಹಿಳೆಯರ ಮೇಲಿನ ಅತ್ಯಾಚಾರ ಮತ್ತು ಹತ್ಯೆ ಪ್ರಕರಣಗಳು ನಿರಂತರವಾಗಿ ನಡೆಯುತ್ತಿದ್ದರೂ, ಆರೋಪಿಗಳನ್ನು ಶೀಘ್ರ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಲ್ಲಿ ಪೊಲೀಸ್ ಇಲಾಖೆ ಮತ್ತು ಸರ್ಕಾರ ವಿಫಲವಾಗಿವೆ ಎಂದು ಅವರು ಆರೋಪಿಸಿದರು.

ಇದೇ ವೇಳೆ ಯುವಕರು ಮಾದಕ ವ್ಯಸನಕ್ಕೆ ಒಳಗಾಗುತ್ತಿರುವುದರಿಂದ ಕೊಲೆ, ಅಪಘಾತ ಸೇರಿದಂತೆ ಹಲವು ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿವೆ. ಈ ಕುರಿತು ಪೊಲೀಸ್ ಇಲಾಖೆಯ ಗಮನಕ್ಕೂ ತರಲಾಗಿದ್ದರೂ, ಮಾದಕ ವಸ್ತುಗಳ ನಿಯಂತ್ರಣ ಹಾಗೂ ಕಾನೂನುಬದ್ಧ ಕ್ರಮ ಕೈಗೊಳ್ಳುವಲ್ಲಿ ವಿಳಂಬ ಮತ್ತು ನಿರ್ಲಕ್ಷ್ಯ ತೋರಲಾಗುತ್ತಿದೆ ಎಂದು ದೂರಿದರು.

ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಇತರೆ ಅಪರಾಧ ಪ್ರಕರಣಗಳಂತೆ ತ್ವರಿತ ಹಾಗೂ ಕಠಿಣ ಕ್ರಮ ಕೈಗೊಳ್ಳಬೇಕು. ಸಮಾಜ ಕಲ್ಯಾಣ ಇಲಾಖೆಯು ಸಂತ್ರಸ್ತ ಕುಟುಂಬಗಳಿಗೆ ಕಾನೂನುಬದ್ಧ ಪರಿಹಾರ, ರಕ್ಷಣೆ ಹಾಗೂ ಅಗತ್ಯ ನೆರವನ್ನು ವಿಳಂಬವಿಲ್ಲದೆ ಒದಗಿಸಬೇಕು ಎಂದು ಆಗ್ರಹಿಸಿದರು.

ದಲಿತರ ಮೇಲೆ ನಡೆಯುತ್ತಿರುವ ನಿರಂತರ ದೌರ್ಜನ್ಯ, ಕೊಲೆ ಹಾಗೂ ಅತ್ಯಾಚಾರ ಪ್ರಕರಣಗಳನ್ನು ತಡೆಯಲು ಸರ್ಕಾರ ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು. ಪ್ರಕರಣಗಳಲ್ಲಿ ತಪ್ಪಿತಸ್ಥರೆಂದು ನ್ಯಾಯಾಲಯದಲ್ಲಿ ಸಾಬೀತಾದವರಿಗೆ ಕಾನೂನಿನ ಪ್ರಕಾರ ಕಠಿಣ ಶಿಕ್ಷೆಯಾಗುವಂತೆ ಕ್ರಮ ವಹಿಸುವ ಮೂಲಕ ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂದು ದಮನಿತ ಸೇವಾ ಸಂಸ್ಥೆಯ ಅಧ್ಯಕ್ಷ ಎಂ. ಭರತ್ ಕುಮಾರ್ ಹಾಗೂ ಪದಾಧಿಕಾರಿಗಳು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸುಶೀಲ್ ಕುಮಾರ್, ಮರೆಪ್ಪ, ನರಸಿಂಹಲು, ಪರಶು, ಎಂ.ಡಿ. ಹಾಜಿ, ಜಗದೀಶ್, ಗೌಸ್, ವೀರೇಶ್, ರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕೃಷಿಯೊಂದಿಗೆ ಹೈನುಗಾರಿಕೆ ಸೇರಿ ಪೂರಕ ಆದಾಯದತ್ತ ರೈತರು ಗಮನಹರಿಸಲಿ: ಡಾ. ತಿಮ್ಮಣ್ಣ



ರಾಯಚೂರು, ಸೆ.2: ರೈತರು ಕೃಷಿಯನ್ನೇ ಏಕೈಕ ಆದಾಯದ ಮೂಲವನ್ನಾಗಿ ಅವಲಂಬಿಸದೆ, ಹೈನುಗಾರಿಕೆ, ಕುರಿ, ಕೋಳಿ ಸಾಕಾಣಿಕೆ ಸೇರಿದಂತೆ ವಿವಿಧ ಕೃಷಿ ಪೂರಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಹೆಚ್ಚುವರಿ ಆದಾಯ ಗಳಿಸುವತ್ತ ಗಮನಹರಿಸಬೇಕು ಎಂದು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ. ತಿಮ್ಮಣ್ಣ ಸಲಹೆ ನೀಡಿದರು.

ನಗರದಲ್ಲಿ ಸೆ.2ರಿಂದ 4ರವರೆಗೆ ವಿವೇಕ ಗ್ರಾಮೀಣ ಜೀವನಾಧಾರ ಕೇಂದ್ರ, ಟೆಕ್ಸಾಸ್ ಇನ್‌ಸ್ಟ್ರುಮೆಂಟ್ಸ್ ಹಾಗೂ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಆಯೋಜಿಸಿರುವ ಮೂರು ದಿನಗಳ ವೈಜ್ಞಾನಿಕ ಹೈನುಗಾರಿಕೆ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿ ಕ್ಷೇತ್ರದಲ್ಲಿ ರೈತರು ಹವಾಮಾನ ವೈಪರೀತ್ಯ, ಉತ್ಪಾದನಾ ವೆಚ್ಚ ಹೆಚ್ಚಳ ಸೇರಿದಂತೆ ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಕೃಷಿಯೊಂದಿಗೆ ಪರ್ಯಾಯ ಆದಾಯದ ಮೂಲಗಳನ್ನು ರೂಪಿಸಿಕೊಳ್ಳುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಸಂಸ್ಥೆಯು ಕಳೆದ ಎರಡು ವರ್ಷಗಳಿಂದ ರೈತರಿಗೆ ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡುತ್ತಿದ್ದು, ರೈತರು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಆಯುರ್ವೇದ ತಜ್ಞ ಡಾ. ಸಿ.ಎನ್. ಶಿರಸಗಿ ಮಾತನಾಡಿ, ಹೈನುಗಾರಿಕೆ ಕ್ಷೇತ್ರದಲ್ಲಿ ಇತ್ತೀಚಿನ ವರ್ಷಗಳಲ್ಲಿ ಸಾಕಷ್ಟು ವೈಜ್ಞಾನಿಕ ಹಾಗೂ ತಾಂತ್ರಿಕ ಬದಲಾವಣೆಗಳಾಗಿವೆ. ಹಾಲು ಹಿಂಡುವ ಯಂತ್ರಗಳು, ಸುಧಾರಿತ ಕೊಟ್ಟಿಗೆ ವಿನ್ಯಾಸ, ಉತ್ತಮ ನಿರ್ವಹಣಾ ವಿಧಾನಗಳು ಸೇರಿದಂತೆ ಹಲವು ಆಧುನಿಕ ತಂತ್ರಜ್ಞಾನಗಳು ಲಭ್ಯವಿವೆ. ರೈತರು ಇವುಗಳ ಕುರಿತು ಸಮಗ್ರ ತರಬೇತಿ ಪಡೆದು ಹೈನುಗಾರಿಕೆಯನ್ನು ಹೆಚ್ಚು ಲಾಭದಾಯಕ ಉದ್ಯಮವನ್ನಾಗಿ ರೂಪಿಸಿಕೊಳ್ಳಬೇಕು ಎಂದರು.

ಹಾಲನ್ನು ಕೇವಲ ನೇರವಾಗಿ ಮಾರಾಟ ಮಾಡುವುದಕ್ಕೆ ಸೀಮಿತವಾಗದೆ, ಮೊಸರು, ತುಪ್ಪ ಸೇರಿದಂತೆ ಮೌಲ್ಯವರ್ಧಿತ ಹಾಲಿನ ಉತ್ಪನ್ನಗಳನ್ನು ತಯಾರಿಸಿ ಮಾರಾಟ ಮಾಡುವ ಮೂಲಕ ಹೆಚ್ಚಿನ ಆದಾಯ ಗಳಿಸಬಹುದಾಗಿದೆ. ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿವಿಧ ಜಾನುವಾರು ತಳಿಗಳ ಮಾಹಿತಿ, ಮೇವಿನ ಬೀಜಗಳು ಹಾಗೂ ಅಗತ್ಯ ತಾಂತ್ರಿಕ ಮಾರ್ಗದರ್ಶನ ಲಭ್ಯವಿದ್ದು, ರೈತರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ತರಬೇತಿಯ ಸಂಪನ್ಮೂಲ ವ್ಯಕ್ತಿ ಹಾಗೂ ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಶ್ರೀಧರ್ ಮಾತನಾಡಿ, ಮೂರು ದಿನಗಳ ತರಬೇತಿಯಲ್ಲಿ ಹಸುಗಳ ವಿವಿಧ ತಳಿಗಳು, ಮೇವು ಬೆಳೆಯುವ ವಿಧಾನ, ಜಾನುವಾರುಗಳಲ್ಲಿ ಕಾಣಿಸಿಕೊಳ್ಳುವ ರೋಗಗಳ ಲಕ್ಷಣಗಳು, ಅವುಗಳ ತಡೆಗಟ್ಟುವಿಕೆ ಹಾಗೂ ಲಸಿಕೆಗಳ ಕುರಿತು ಪ್ರಾಯೋಗಿಕ ಮಾಹಿತಿ ನೀಡಲಾಗುವುದು ಎಂದರು.

ರೈತರು ಸರ್ಕಾರದ ವಿವಿಧ ಸಾಲ ಹಾಗೂ ಸಹಾಯಧನ ಯೋಜನೆಗಳ ಬಗ್ಗೆ ಮಾಹಿತಿ ಪಡೆದು ಅವುಗಳ ಪ್ರಯೋಜನವನ್ನು ಬಳಸಿಕೊಳ್ಳಬೇಕು. ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಂಡು ಹೈನುಗಾರಿಕೆಯನ್ನು ಉದ್ಯಮದ ಸ್ವರೂಪದಲ್ಲಿ ಕೈಗೊಂಡಲ್ಲಿ ಉತ್ತಮ ಆದಾಯ ಗಳಿಸಲು ಸಾಧ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವೇಕ ಗ್ರಾಮೀಣ ಜೀವನಾಧಾರ ಕೇಂದ್ರದ ಡಬ್ಲ್ಯುಎಎಸ್‌ಎಚ್ ಕಾರ್ಯಕ್ರಮದ ಸಂಯೋಜಕ ವಿನಾಯಕ ಆರ್. ಮಾತನಾಡಿ, ಸಂಸ್ಥೆಯು ಕಳೆದ ಎರಡೂವರೆ ವರ್ಷಗಳಿಂದ ಗ್ರಾಮೀಣ ನಿರುದ್ಯೋಗಿ ಯುವಕ-ಯುವತಿಯರು, ರೈತರು ಹಾಗೂ ರೈತ ಮಹಿಳೆಯರನ್ನು ಗಮನದಲ್ಲಿಟ್ಟುಕೊಂಡು ಹೈನುಗಾರಿಕೆ, ಕುರಿ, ಕೋಳಿ, ಜೇನು, ಮೀನು ಹಾಗೂ ಅಣಬೆ ಸಾಕಾಣಿಕೆ ಸೇರಿದಂತೆ ವಿವಿಧ ಕೃಷಿ ಆಧಾರಿತ ತರಬೇತಿಗಳನ್ನು ನೀಡುತ್ತಿದೆ ಎಂದರು.

ತರಬೇತಿ ಪಡೆದ ರೈತರು ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರು ಸಣ್ಣ ಸಾಲ ಸೌಲಭ್ಯಗಳನ್ನು ಪಡೆದುಕೊಂಡು ವಿವಿಧ ಸಾಕಾಣಿಕೆ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ತರಬೇತಿ ಮುಗಿದ ಬಳಿಕವೂ ಸಂಸ್ಥೆಯು ಫಲಾನುಭವಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅವರ ಪ್ರಗತಿ ಹಾಗೂ ಎದುರಾಗುವ ಸಮಸ್ಯೆಗಳ ಕುರಿತು ಅನುಸರಣೆ ಮಾಡುತ್ತಿದೆ ಎಂದು ತಿಳಿಸಿದರು.

ಅಲ್ಲದೆ, ರಾಷ್ಟ್ರೀಯ ಜಾನುವಾರು ಮಿಷನ್ (ಎನ್‌ಎಲ್‌ಎಂ) ಹಾಗೂ ಪ್ರಧಾನಮಂತ್ರಿ ಉದ್ಯೋಗ ಸೃಜನ ಕಾರ್ಯಕ್ರಮ (ಪಿಎಂಇಜಿಪಿ) ಸೇರಿದಂತೆ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅಗತ್ಯವಿರುವ ಯೋಜನಾ ವರದಿಗಳನ್ನು ಫಲಾನುಭವಿಗಳಿಗೆ ಉಚಿತವಾಗಿ ಸಿದ್ಧಪಡಿಸಿಕೊಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ವಿವೇಕ ಗ್ರಾಮೀಣ ಜೀವನಾಧಾರ ಕೇಂದ್ರದ ಸಂಯೋಜಕಿ ಕುಮಾರಿ ಕಾವ್ಯ ಪ್ರಾಸ್ತಾವಿಕವಾಗಿ ಮಾತನಾಡಿದರು. ದಾಖಲಾತಿ ಅಧಿಕಾರಿ ಪಲ್ಲವಿ ಎಂ. ಸ್ವಾಗತಿಸಿದರು. ಲಂಗಪ್ಪ ಕುರ್ಡಿ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಸಿಬ್ಬಂದಿಗಳಾದ ಈರಣ್ಣ, ಕಾರ್ತಿಕ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವಸತಿ ನಿಲಯಗಳಲ್ಲಿ ಆಹಾರ ಸುರಕ್ಷತೆಗೆ ವಿಶೇಷ ನಿಗಾ ಅಗತ್ಯ: ಡಾ. ಚಂದ್ರಶೇಖರಯ್ಯ ಸ್ವಾಮಿ



ಮಾನ್ವಿ, ಸೆ.2: ವಸತಿ ನಿಲಯಗಳಲ್ಲಿ ಮಕ್ಕಳಿಗೆ ಆಹಾರ ಸಿದ್ಧಪಡಿಸುವ ಮುನ್ನ ಪಾತ್ರೆಗಳ ಸ್ವಚ್ಛತೆ, ಬಳಸುವ ನೀರಿನ ಸುರಕ್ಷತೆ ಹಾಗೂ ಊಟಕ್ಕೂ ಮುನ್ನ ಮಕ್ಕಳು ಕೈತೊಳೆದಿರುವ ಬಗ್ಗೆ ನಿಗಾ ವಹಿಸುವುದು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮುಖ್ಯ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಚಂದ್ರಶೇಖರಯ್ಯ ಸ್ವಾಮಿ ತಿಳಿಸಿದರು.

ಮಾನ್ವಿ ಪಟ್ಟಣದ ಅಲ್ಪಸಂಖ್ಯಾತರ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಬೆಳಗಿನ ಉಪಾಹಾರ ಸೇವಿಸಿದ ನಂತರ ಮಕ್ಕಳಲ್ಲಿ ಅಸ್ವಸ್ಥತೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ವೈದ್ಯಕೀಯ ತಂಡದೊಂದಿಗೆ ವಸತಿ ಶಾಲೆಗೆ ಭೇಟಿ ನೀಡಿ ಅಡುಗೆ ಮನೆ, ಆಹಾರ ಪದಾರ್ಥಗಳ ದಾಸ್ತಾನು ಕೊಠಡಿ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಪರಿಶೀಲಿಸಿ ಸಿಬ್ಬಂದಿಗೆ ಅಗತ್ಯ ಸೂಚನೆ ನೀಡಿದರು.

ಆಹಾರ ಪದಾರ್ಥಗಳ ದಾಸ್ತಾನು ಕೊಠಡಿಯಲ್ಲಿ ತರಕಾರಿ ಹಾಗೂ ಇತರ ಆಹಾರ ಸಾಮಗ್ರಿಗಳನ್ನು ನೆಲದ ಮೇಲೆ ಇಡಬಾರದು. ದವಸ-ಧಾನ್ಯಗಳ ಬಳಿ ಇಲಿ ಹಾಗೂ ಇತರ ಕೀಟಗಳು ನುಸುಳದಂತೆ ಎಚ್ಚರಿಕೆ ವಹಿಸಬೇಕು. ತರಕಾರಿಗಳನ್ನು ಶುದ್ಧ ನೀರಿನಿಂದ ಚೆನ್ನಾಗಿ ತೊಳೆಯಬೇಕು. ಸಿದ್ಧಪಡಿಸದ ಆಹಾರ ಪದಾರ್ಥಗಳನ್ನು ಪ್ರತ್ಯೇಕವಾಗಿ ಇಡಬೇಕು ಹಾಗೂ ಕಾಳು-ಧಾನ್ಯಗಳನ್ನು ಮುಚ್ಚಿದ ಡಬ್ಬಗಳಲ್ಲಿ ಸಂಗ್ರಹಿಸಬೇಕು ಎಂದು ಸೂಚಿಸಿದರು.

ಅಡುಗೆ ಸಾಮಗ್ರಿಗಳನ್ನು ಸ್ವಚ್ಛಗೊಳಿಸುವ ಸ್ಥಳದಲ್ಲಿ ನೀರು ಸರಾಗವಾಗಿ ಹರಿದು ಹೋಗುವಂತೆ ವ್ಯವಸ್ಥೆ ಮಾಡಬೇಕು. ಮಕ್ಕಳಿಗೆ ಆಹಾರ ಬಡಿಸುವ ಮುನ್ನ ಅಡುಗೆ ಸಿಬ್ಬಂದಿ ಹಾಗೂ ಮಕ್ಕಳು ಸಾಬೂನು ಮತ್ತು ನೀರಿನಿಂದ ಕೈಗಳನ್ನು ಚೆನ್ನಾಗಿ ತೊಳೆಯುವುದನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ತಿಳಿಸಿದರು.

ಮನೆಯಲ್ಲಾಗಲಿ ಅಥವಾ ವಸತಿ ನಿಲಯದಲ್ಲಾಗಲಿ ವೈಯಕ್ತಿಕ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸುರಕ್ಷಿತ ಕುಡಿಯುವ ನೀರನ್ನು ಮಾತ್ರ ಸೇವಿಸಬೇಕು. ಊಟಕ್ಕೂ ಮುನ್ನ ಹಾಗೂ ಶೌಚಾಲಯ ಬಳಸಿದ ನಂತರ ಸಾಬೂನು ಮತ್ತು ನೀರಿನಿಂದ ಕೈಗಳನ್ನು ತೊಳೆಯುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಪ್ರವೀಣ್, ಆರ್‌ಬಿಎಸ್‌ಕೆ ವೈದ್ಯರಾದ ಡಾ. ಸುಧಾಕರ ಬಾಬು, ಡಾ. ಶ್ರೀಧರ್ ಇಲ್ಲೂರು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಪ್ರಾಂಶುಪಾಲ ವೆಂಕಟೇಶ್ ನಾಯಕ, ಡಿವೈಹೆಚ್‌ಇಓ ಬಸಯ್ಯ, ಎಪಿಡೆಮಿಯಾಲಜಿಸ್ಟ್ ಶ್ರೀನಿವಾಸ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸೂಗುರಪ್ಪ, ಶೇಖ್, ಹಿರಿಯ ಪಿಹೆಚ್‌ಸಿಓ ಪದ್ಮಾ, ಬಿಪಿಎಂ ರಾಜೇಶ್ ಆರ್. ಸೇರಿದಂತೆ ಶಿಕ್ಷಕರು ಹಾಗೂ ಅಡುಗೆ ಸಿಬ್ಬಂದಿ ಉಪಸ್ಥಿತರಿದ್ದರು.

## ಬರಗಾಲ ಪೀಡಿತ ಪ್ರದೇಶವಾಗಿ ಘೋಷಿಸಲು ಆಗ್ರಹ: ಆಬ್ರಾಹಂ ಪನ್ನೂರು



ಮಾನ್ವಿ: ಮಾನ್ವಿ ತಾಲೂಕನ್ನು ಬರಗಾಲ ಪೀಡಿತ ಪ್ರದೇಶವಾಗಿ ಘೋಷಿಸಿ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಕರ್ನಾಟಕ ಜಾಗೃತ ರೈತ ಸಂಘದ ರಾಜ್ಯಾಧ್ಯಕ್ಷ ಆಬ್ರಾಹಂ ಪನ್ನೂರು ಸರ್ಕಾರವನ್ನು ಒತ್ತಾಯಿಸಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ಜಾಗೃತ ರೈತ ಸಂಘದ ತಾಲೂಕು ಸಮಿತಿ ವತಿಯಿಂದ ಮುಖ್ಯಮಂತ್ರಿಗಳಿಗೆ ಉಪತಹಶೀಲ್ದಾರ್ ಮೂಲಕ ಮನವಿ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಮಾನ್ವಿ ತಾಲೂಕಿನಲ್ಲಿ ಬರ ಪರಿಸ್ಥಿತಿ ಉಂಟಾಗಿರುವುದರಿಂದ ಕೂಡಲೇ ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕು. ಸಂಕಷ್ಟದಲ್ಲಿರುವ ರೈತರ ಸಾಲವನ್ನು ಮನ್ನಾ ಮಾಡಬೇಕು. ರೈತರು ಬೆಳೆದ ಭತ್ತ, ಹತ್ತಿ, ತೊಗರಿ, ಈರುಳ್ಳಿ ಸೇರಿದಂತೆ ವಿವಿಧ ಬೆಳೆಗಳಿಗೆ ನ್ಯಾಯಯುತ ಬೆಂಬಲ ಬೆಲೆ ನಿಗದಿಪಡಿಸಬೇಕು. ಬೆಳೆ ನಷ್ಟ ಅನುಭವಿಸಿದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಂವಿಧಾನದ 371(ಜೆ) ಮೀಸಲಾತಿಯಡಿ ಖಾಲಿ ಇರುವ ಎಲ್ಲ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಗ್ರಾಮೀಣ ಭಾಗದ ಜನರು ಉದ್ಯೋಗಕ್ಕಾಗಿ ವಲಸೆ ಹೋಗುವುದನ್ನು ತಪ್ಪಿಸಲು ಗ್ರಾಮ ಪಂಚಾಯಿತಿಗಳ ಮೂಲಕ ಗ್ರಾಮಗಳಲ್ಲಿಯೇ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಲಿಂಗಣ್ಣ ಮಾಡಗಿರಿ, ರಾಜೇಂದ್ರ ಕಲ್ಲೂರು, ಪಕ್ಕೀರಮ್ಮ, ದುರುಗಮ್ಮ, ವಸಂತ ಕೋಟ್ನೆಕಲ್, ರೇಣುಕಮ್ಮ, ಸದಾನಂದ ಜಾಗೀರಪನ್ನೂರು, ಹನುಮಂತ ಬ್ಯಾಗವಾಟ, ಸಿದ್ದಪ್ಪ ಅಮರವಾತಿ, ಹನುಮಂತಿ ಕರಡಿಗುಡ್ಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜಗದೊದ್ಧಾರಕ ಶ್ರೀಕೃಷ್ಣನ ಜನ್ಮಾಷ್ಟಮಿ

ಕೃಷ್ಣಾಯ ವಾಸುದೇವಾಯ
ಹರಯೇ ಪರಮಾತ್ಮನೇ
ಪ್ರಣತಕ್ಲೇಶನಾಶಾಯ
ಗೋವಿಂದಾಯ ನಮೋ ನಮಃ

ಹಿಂದೂಗಳಲ್ಲಿ ಜಾತಿ, ಕುಲ, ಬಡವ ಬಲ್ಲಿದನೆಂಬ ಯಾವುದೇ ಭೇಧವಿಲ್ಲದೆ ಸರ್ವರು ಆರಾಧಿಸುವ ದೇವರೆಂದರೆ ಶ್ರೀಕೃಷ್ಣ. ಈತನನ್ನು ಗೋವಿಂದ, ಅಚ್ಚುತ, ಶ್ಯಾಮ, ರಾಧೆ ರಮಣ ಇತ್ಯಾದಿ ನೂರಾರು ಹೆಸರುಗಳಿಂದ ಪೂಜಿಸುತ್ತೇವೆ. ಮೇಘಶ್ಯಾಮ ವರ್ಣದ ಅಂದರೆ ಕೃಷ್ಣನ ದೈಹಿಕ ಬಣ್ಣವು ನೀಲಿ ಮಿಶ್ರಿತ ಕಪ್ಪಾಗಿದ್ದು, ಕಮಲದಂತೆ ವಿಶಾಲವಾದ ಕಣ್ಣುಗಳು ಮತ್ತು ಮೊಗದಲ್ಲಿ ಮಂದಹಾಸವಿರುತ್ತದೆ. ಪೀತಾಂಬರ ಧರಿಸಿ, ಮಯೂರ ಮುಕುಟವೇರಿಸಿ, ಎದೆಯ ಮೇಲೆ ಕೌಸ್ತುಭ ಮಣಿಯನ್ನು ಕೊರಳಲ್ಲಿ ವೈಜಯಂತಿ ಮಾಲೆ, ಕೈಯಲ್ಲಿ ಕೊಳಲು ಮತ್ತು ಸುದರ್ಶನ ಚಕ್ರವಿರುತ್ತದೆ. ಕೃಷ್ಣನು ಬಾಲ್ಯದಲ್ಲಿ ಬೆಣ್ಣೆ ಕಳ್ಳನಾಗಿ, ಕಿಶೋರಾವಸ್ಥೆಯಲ್ಲಿ ಗೋಪಿಕಾ ಲೋಲನಾಗಿ, ಯೌವನದಲ್ಲಿ ರಾಜತಾಂತ್ರಿಕನಾಗಿ ಹಲವು ಲೀಲೆಗಳನ್ನು ತೋರಿದವನು. ಮಹಾಭಾರತದ ಯುದ್ಧ ಭೂಮಿಯಲ್ಲಿ ಅರ್ಜುನನಿಗೆ 'ಭಗವದ್ಗೀತೆ'ಯನ್ನು ಬೋಧಿಸುವ ಮೂಲಕ ಇಡೀ ಜಗತ್ತಿಗೆ ದಾರಿ ದೀಪವಾದ ಮಾರ್ಗದರ್ಶಕ ಈ ನಮ್ಮ ಕೃಷ್ಣ.

ಯದಾ ಯದಾ ಹಿ ಧರ್ಮಸ್ಯ
ಗ್ಲಾನಿರ್ಭವತಿ ಭಾರತ
ಅಭ್ಯುತ್ಥಾನಮಧರ್ಮಸ್ಯ
ತದಾತ್ಮಾನಂ ಸೃಜಾಮ್ಯಹಮ್
ಪರಿತ್ರಾಣಾಯ ಸಾಧೂನಾಂ
ವಿನಾಶಾಯ ಚ ದುಷ್ಕೃತಾಂ
ಧರ್ಮಸಂಸ್ಥಾಪನಾರ್ಥಾಯ
ಸಂಭವಾಮಿ ಯುಗೇ ಯುಗೇ

ಅರ್ಥಾತ್ ಯಾವ ಯಾವಾಗ ಧರ್ಮದ ಅವನತಿಯಾಗುತ್ತದೆಯೋ ಮತ್ತು ಅಧರ್ಮವು ಹೆಚ್ಚಾಗುತ್ತದೆಯೋ, ಆಗ ನಾನೇ (ಕೃಷ್ಣ) ಸ್ವತಃ ಅವತರಿಸುತ್ತೇನೆ. ಸಜ್ಜನರ ರಕ್ಷಣೆಗಾಗಿ, ದುಷ್ಟರ ನಾಶಕ್ಕಾಗಿ ಮತ್ತು ಧರ್ಮದ ಸ್ಥಾಪನೆಗಾಗಿ ನಾನು ಪ್ರತಿಯುಗದಲ್ಲೂ ಹುಟ್ಟಿಬರುತ್ತೇನೆ ಎಂದು ಶ್ರೀಕೃಷ್ಣ ಹೇಳುತ್ತಾನೆ. ಹಾಗಾದರೆ ಶ್ರೀಕೃಷ್ಣ ಹುಟ್ಟಿದ್ದು ಯಾವಾಗ ಮತ್ತು ಜನ್ಮಾಷ್ಟಮಿಯ ಹಿಂದಿರುವ ವಿಚಾರಗಳನ್ನು ತಿಳಿಯೋಣ.

ಶ್ರಾವಣದಿಂದ ಹಬ್ಬಗಳ ಪರ್ವ ಪ್ರಾರಂಭವಾಗುವ ಹಿಂದೂ ಸಂಪ್ರದಾಯಗಳಲ್ಲಿ ಶ್ರಾವಣ ಕಳೆದು ಭಾದ್ರಪದ ಮಾಸದ ಕೃಷ್ಣಪಕ್ಷದ ಅಷ್ಟಮಿ ತಿಥಿಯಂದು, ರೋಹಿಣಿ ನಕ್ಷತ್ರದಲ್ಲಿ ಶ್ರೀಕೃಷ್ಣನು ಜನಿಸಿದನು. ಈ ಪವಿತ್ರ ದಿನವೇ ಕೃಷ್ಣ ಜನ್ಮಾಷ್ಟಮಿ. ಇದು ಅಸಾಮಾನ್ಯ ಮಗುವಿನ ಜನ್ಮದಿನವಾಗಿದ್ದು, ದೇವರು ಮನುಷ್ಯನ ಅವತಾರದಲ್ಲಿ ಭೂಮಿಗೆ ಬಂದು, ಅನ್ಯಾಯದ ವಿರುದ್ಧ ಸತ್ಯದ ಧ್ವನಿ ಮೊಳಗಿಸುತ್ತ, ಅಧರ್ಮದ ವಿರುದ್ಧ ಧರ್ಮದ ಬೆಳಕು ಪ್ರಜ್ವಲಿಸುವ ದಿನ. ಇದರ ಹಿನ್ನೆಲೆಯನ್ನು ತಿಳಿಯೋಣವೇ?

ಕಂಸನಿಗೆ ತನ್ನ ತಂಗಿ ದೇವಕಿಯ ಎಂಟನೆಯ ಮಗನಿಂದಲೇ ಮರಣ ಸಂಭವಿಸುತ್ತದೆ ಎಂಬ ಭವಿಷ್ಯವಾಣಿ ಕೇಳಿಬಂದಾಗ, ಅವನ ಹೃದಯದಲ್ಲಿ ಭಯ ಮನೆಮಾಡಿತು. ಅಧಿಕಾರದ ಮದದಲ್ಲಿ ಮುಳುಗಿದ್ದ ಕಂಸನು ತನ್ನದೇ ತಂಗಿ ಮತ್ತು ಆಕೆಯ ಪತಿಯನ್ನು ಸೆರೆಮನೆಗೆ ಹಾಕಿದನು. ದೇವಕಿಯ ಮಕ್ಕಳನ್ನು ಒಂದೊಂದಾಗಿ ಕೊಲ್ಲುತ್ತಾ ಹೋದನು. ಕಗ್ಗತ್ತಲಿನ ಕಾರಾಗೃಹದ ಕೋಣೆಯಲ್ಲಿ ದೇವಕಿ ವಸುದೇವರಲ್ಲಿ ಆತಂಕದ ಕಣ್ಣೀರಿದ್ದರೆ, ಹೊರಗೆ ಕಂಸನ ಕ್ರೌರ್ಯದ ನೆರಳು ಆರ್ಭಟಿಸುಸತಿತ್ತು. ಲೋಕದ ಕತ್ತಲೆಯನ್ನು ಕಳೆಯಲು ಜನ್ಮವೆತ್ತುವ ಮಗುವಿಗಾಗಿ ಸಜ್ಜನರು ಕಾಯುತ್ತಿದ್ದರು. ಆದರೆ ವಿಧಿಯ ನಿರ್ಧಾರವನ್ನು ಯಾರಿಂದಲೂ ಬದಲಿಸಲು ಸಾಧ್ಯವಿಲ್ಲ. ಕತ್ತಲು ತುಂಬಿದ್ದ ಆ ಕಾರಾಗೃಹದಲ್ಲಿ ಕೃಷ್ಣ ಜನಿಸಿದಾಗ, ಅದು ಕೇವಲ ಒಂದು ಕೋಣೆಯಲ್ಲಿ ಬೆಳಕು ಮೂಡಿದ ಕ್ಷಣವಾಗಿರಲಿಲ್ಲ. ಸಂಪೂರ್ಣ ಪ್ರಕೃತಿಯ ಹೃದಯದಲ್ಲಿ ಆಶಾಕಿರಣ ಬೆಳಗಿದ ಕ್ಷಣವಾಗಿತ್ತು. ಕಂಸನಿಗೆ ಕಾಣದಂತೆ ವಸುದೇವನು ಪುಟ್ಟ ಕೃಷ್ಣನನ್ನು ಹೊತ್ತು ಯಮುನಾ ನದಿಯನ್ನು ದಾಟಿ ಗೋಕುಲಕ್ಕೆ ತಲುಪಿದನು. ಯಶೋದೆ ನಂದರ ಮನೆಯಲ್ಲಿ ಸಾಕು ಮಗನಾಗಿ ಕೃಷ್ಣ ಬೆಳೆದನು. ಕೃಷ್ಣನ ಬಾಲಲೀಲೆ. ಅವನ ತುಂಟ ನಗೆ, ಮುದ್ದಾದ ಮಾತು, ಬೆಣ್ಣೆ ಕದ್ದಾಟ, ಗೋಪಾಲಕರ ಜೊತೆಗಿನ ಆಟ, ಗೋಪಿಕೆಯರೊಂದಿಗೆ ತುಂಟಾಟ, ಇವೆಲ್ಲವೂ ಕೃಷ್ಣನನ್ನು ನಮ್ಮ ಮನೆಯ ಮಗುವಿನಂತೆ ಮಾಡಿಬಿಟ್ಟವು. ಕೃಷ್ಣನ ಬಾಲ ಲೀಲೆಗಳಲ್ಲಿ ವಿಶೇಷತೆಯಿದೆ. ಶ್ರೀಕೃಷ್ಣ ಮನೆಯ ಮಗುವಾಗಿ, ಅಂಗಳದಲ್ಲಿ ಆಡುತ್ತಿದ್ದಾನೆ. ಹಾಲುಣಿಸಿ ಕೊಲ್ಲಲು ಬಂದ ಪೂತನಿಯನ್ನು ಸಂಹರಿಸಿ ನಗುತ್ತಾನೆ. ಬಾಯಿ ತೆರೆದು ತಾಯಿಗೆ ವಿಶ್ವ ದರ್ಶನ ಮಾಡುತ್ತಾನೆ. ಬೆಣ್ಣೆಯನ್ನು, ತಿನ್ನುತ್ತ, ತುಂಟಾಟ ಆಡುತ್ತಾನೆ.




ಭಕ್ತರ ಹೃದಯದಲ್ಲಿರುವ ಪ್ರೀತಿಯ ಬೆಣ್ಣೆಯನ್ನು ಕದಿಯಲು ಬಂದವನು ಎಂಬ ಭಕ್ತಿಯ ವ್ಯಾಖ್ಯಾನ ಇಲ್ಲಿ ಕಾಣುತ್ತೇವೆ. ಶ್ರೀಕೃಷ್ಣನು ನಮ್ಮ ಹೃದಯದಲ್ಲಿ ಅಡಗಿರುವ ಅಹಂಕಾರ, ದ್ವೇಷ, ಅಸೂಯೆಯನ್ನು ಕದ್ದು, ಮನಸ್ಸನ್ನು ಶುದ್ಧಗೊಳಿಸಿ, ಪ್ರೀತಿ ಮತ್ತು ಕರುಣೆಯನ್ನು ತುಂಬಿಸುತ್ತಾನೆ. ಆಗ ಅಲ್ಲಿ ಭಕ್ತಿಯ ನಾದ ಮೊಳಗೊತ್ತದೆ. ಕೃಷ್ಣನ ಕೈಯಲ್ಲಿ ಯಾವಾಗಲೂ ಮಹಾನಂದ ಮತ್ತು ಸಮ್ಮೋಹಿನಿ ಕೊಳಲುಗಳು ಇರುತ್ತವೆ. ಕೊಳಲು ತನ್ನದೇ ಆದ ಸ್ವರವನ್ನು ಹೊಂದಿಲ್ಲ. ಅದನ್ನು ಊದಿದಾಗ ಮಾತ್ರ ಅದು ಸಂಗೀತವಾಗುತ್ತದೆ. ಹಾಗೆಯೇ ಮನುಷ್ಯನು ತನ್ನ ಅಹಂಕಾರವನ್ನು ಬದಿಗಿಟ್ಟು, ದೇವರ ಕೈಯಲ್ಲಿರುವ ಕೊಳಲಿನಂತೆ ತನ್ನನ್ನು ತಾನು ಸಮರ್ಪಿಸಿಕೊಂಡಾಗ ಬದುಕು ಸಂಗೀತವಾಗುತ್ತದೆ ಎಂಬ ಸಂದೇಶವನ್ನು ಕೃಷ್ಣನ ಕೊಳಲು ನಮಗೆ ನೀಡುತ್ತದೆ.

"ನಾನು" ಎಂಬ ಅಹಂಕಾರ ತೊಲಗಿ, ನಾವು" ಎಂಬ ಪ್ರೀತಿ ಹೆಚ್ಚಾದರೆ, ಅಲ್ಲಿ ಕೃಷ್ಣನಿದ್ದಾನೆ. ಕೃಷ್ಣನ ಜೀವನ ನಮಗೆ ಪ್ರೀತಿಯ ಹಲವು ರೂಪಗಳನ್ನು ತೋರಿಸುತ್ತದೆ. ತಾಯಿಯ ಮೇಲಿನ ಪ್ರೀತಿ, ಸ್ನೇಹಿತರ ಪ್ರೀತಿ, ಗೋಪಿಕೆಯರ ಆತ್ಮೀಯತೆ, ರಾಧೆಯ ಮೇಲಿನ ಅನುರಾಗ, ಭಕ್ತರ ಮೇಲಿನ ಕರುಣೆ. ಒತ್ತಾಯವಾಗಿ ಪಡೆಯುವುದು ಪ್ರೀತಿಯಲ್ಲ. ನಿರೀಕ್ಷೆಯಿಲ್ಲದೆ, ಸ್ವಾರ್ಥವಿಲ್ಲದೆ, ಹೃದಯವನ್ನು ಸಂಪೂರ್ಣವಾಗಿ ಅರ್ಪಿಸುವುದು ಪ್ರೀತಿ. ಕೃಷ್ಣನನ್ನು ನೆನಪಿಸಿಕೊಂಡಾಗ ಮನಸ್ಸಿನಲ್ಲಿ ಭಕ್ತಿಯ ಜೊತೆಗೆ ಒಂದು ಮಧುರತೆಯೂ ಮೂಡುತ್ತದೆ. ಅದೇ ನೈಜ ಪ್ರೀತಿಯಲ್ಲವೇ?

ಕೃಷ್ಣನೆಂದರೆ ಮಹಾನ್ ತತ್ವಜ್ಞಾನಿ, ಅದ್ಭುತ ಸ್ನೇಹಿತ, ಧರ್ಮದ ರಕ್ಷಕ, ಮಾರ್ಗದರ್ಶಕ, ರಾಜಕೀಯ ಚತುರ, ಅಬಲೆಯರ ರಕ್ಷಕ, ದುಷ್ಟರ ಸಂಹಾರಕ, ಶಿಷ್ಟರ ರಕ್ಷಕ ಈ ನಮ್ಮ ಕೃಷ್ಣ. ಜಾತಿ, ಮತ, ಬಡವ ಬಲ್ಲಿದ, ಮಹಿಳೆ ಪುರುಷರೆಂಬ ಭೇಧವಿಲ್ಲದೆ ಸರ್ವರನ್ನು ಸಮಾನವಾಗಿ ಪ್ರೀತಿಸುತ್ತ, ಪ್ರಕೃತಿ, ಪಶು ಪಕ್ಷಿಗಳ ಪಾಲಕನಾಗಿದ್ದಾನಲ್ಲವೇ? ಭಗವದ್ಗೀತೆಯ ಮೂಲಕ ಜೀವನದ ಮಹಾಸತ್ಯ "ಕರ್ಮ ಮಾಡು, ಫಲದ ಚಿಂತೆ ಬೇಡ" ಎಂಬ ಸಂದೇಶ ನೀಡಿದ್ದಾನೆ. ರಣರಂಗದಲ್ಲಿ ಅರ್ಜುನನು ಗೊಂದಲಕ್ಕೊಳಗಾದಾಗ, ಕೃಷ್ಣನು ಅವನಿಗೆ ನೀಡಿದ ಜ್ಞಾನ ಇಂದಿಗೂ ಕೋಟ್ಯಂತರ ಜನರಿಗೆ ದಾರಿದೀಪವಾಗಿದೆ. ಕರ್ಮಣ್ಯೇವಾಧಿಕಾರಸ್ತೇ ಮಾಫಲೇಷು ಕದಾಚನ" ಅಂದರೆ, ಮನುಷ್ಯನಿಗೆ ತನ್ನ ಕರ್ತವ್ಯವನ್ನು ಮಾಡುವ ಹಕ್ಕಿದೆ, ಫಲದ ಮೇಲೆ ಅವನಿಗೆ ಸಂಪೂರ್ಣ ಅಧಿಕಾರವಿಲ್ಲ. ಇದು ಕೇವಲ ಯುದ್ಧಭೂಮಿಗೆ ಅನ್ವಯಿಸುವ ಮಾತಲ್ಲ. ಇಂದಿನ ಜೀವನಕ್ಕೂ ಅನ್ವಯಿಸುತ್ತದೆ. ಪರೀಕ್ಷೆಯಲ್ಲಿ ಫಲಿತಾಂಶದ ಭಯದಿಂದ ಓದುವುದನ್ನು ನಿಲ್ಲಿಸುವ ವಿದ್ಯಾರ್ಥಿಗೆ ಕೃಷ್ಣನ ಸಂದೇಶ ಧೈರ್ಯ ನೀಡುತ್ತದೆ. ವ್ಯವಹಾರದಲ್ಲಿ ಸೋತವನಿಗೆ ಮತ್ತೆ ಪ್ರಯತ್ನಿಸುವ ಶಕ್ತಿ ನೀಡುತ್ತದೆ. ಜೀವನದಲ್ಲಿ ನಿರಾಶನಾದವನಿಗೆ ನಿನ್ನ ಕರ್ತವ್ಯ ಮಾಡು. ಸೋಲಿಗೆ ಹೆದರಬೇಡ. ಫಲವನ್ನು ಕಾಲಕ್ಕೆ ಬಿಡು.''ಎಂಬ ಭರವಸೆ ನೀಡುತ್ತದೆ.

ಇಂದು ವಿಜ್ಞಾನ, ತಂತ್ರಜ್ಞಾನ ಬೆಳೆದಿದೆ. ಮನುಷ್ಯ ಚಂದ್ರನನ್ನೂ ತಲುಪಿದ್ದಾನೆ. ಆದರೆ ಮನುಷ್ಯನ ಮನಸ್ಸಿನಲ್ಲಿ ಅಶಾಂತಿ, ಅಸೂಯೆ, ದ್ವೇಷ, ಸ್ವಾರ್ಥ, ಅಧಿಕಾರ, ಸಂಪತ್ತಿನ ಹಂಬಲ ಹೆಚ್ಚುತ್ತಿದೆ. ಪರಿಣಾಮವಾಗಿ ಅನೇಕ ರೋಗಗಳು, ಮಾನಸಿಕ ಅಸ್ವಸ್ಥತೆ, ಅತೃಪ್ತಿ, ವಿಕೃತಿಗಳು ಹೆಚ್ಚುತ್ತಿವೆ. ಇಂತಹ ಸಮಯದಲ್ಲಿ ಕೃಷ್ಣನ ಜೀವನ ನಮಗೆ ಪ್ರೇರಣೆ ಆಗಬೇಕು. ಸತ್ಯವನ್ನು ರಕ್ಷಿಸುತ್ತ, ಸುತ್ತಲಿರುವವರನ್ನು ಪ್ರೀತಿಸುತ್ತ, ದಯೆ, ಕರುಣೆಯೆಂಬ ಸದ್ಗುಣಗಳನ್ನು ಬೆಳೆಸಿಕೊಳ್ಳುತ್ತ, ಧರ್ಮದ ದಾರಿಯಲ್ಲಿ ನಡೆಯಬೇಕು. ಅನ್ಯಾಯವನ್ನು ಬಗ್ಗುಬಡಿದು, ಕರ್ತವ್ಯವನ್ನು ಮಾಡುತ್ತ, ಅಹಂಕಾರವನ್ನು ಬಿಟ್ಟು ಬದುಕುವುದೇ ಕೃಷ್ಣನ ನಿಜವಾದ ಆರಾಧನೆಯಲ್ಲವೇ?

ವಿಶ್ವಾದ್ಯಂತ ಈಗ ಜನ್ಮಾಷ್ಟಮಿಯ ಆಚರಣೆ ನಡೆಯುತ್ತದೆ. ಮಂದಿರಗಳಲ್ಲಿ ಮನೆಗಳಲ್ಲಿ ವಿಶೇಷ ಪೂಜೆ, ಅಲಂಕಾರ, ಛದ್ಮವೇಷ, ಕೃಷ್ಣನ ಪುಟ್ಟ ಪಾದಗಳ ರಂಗೋಲಿಯ ಮೂಲಕ, ಈ ದಿನ ಕೃಷ್ಣ ಜನಿಸಿದ್ದಾನೆ, ನಮ್ಮ ಮನೆ ಮನಗಳಲ್ಲಿ ಭಕ್ತಿಯ ರಸವನ್ನು ತುಂಬಿದ್ದಾನೆ. ಜನ್ಮಾಷ್ಟಮಿಯಂದು ಶುಚಿರ್ಭೂತರಾಗಿ, ಕೃಷ್ಣನ ಮೂರ್ತಿಗೆ ಅಲಂಕಾರ, ನೈವೇದ್ಯ, ಭಜನೆ, ಪ್ರಸಾದ ಸಂತರ್ಪಣೆ ಮಾತ್ರ ಮಾಡದೇ, ಕೃಷ್ಣನು ಬೋಧಿಸಿರುವ ಜೀವನದ ಸೂತ್ರಗಳನ್ನು ಪಾಲಿಸಬೇಕು.

ಕರುಣೆಯ ಕಣ್ಣಿನಲ್ಲಿ, ಸತ್ಯ ಮತ್ತು ಧರ್ಮದ ನಡೆ ನುಡಿಯಲ್ಲಿ, ನಿಸ್ವಾರ್ಥ ಸೇವೆಯಲ್ಲಿ. ಪ್ರೀತಿಸುವ ಹೃದಯದಲ್ಲಿ ಕೃಷ್ಣ ನೆಲೆಸಿದ್ದಾನೆ. ಕೇವಲ ಉಪವಾಸ ಮಾಡಿ, ಪೂಜೆ ಮಾಡಿ, ಪ್ರಸಾದ ಸ್ವೀಕರಿಸುವುದಕ್ಕೆ ಜನ್ಮಾಷ್ಟಮಿ ಸೀಮಿತವಾಗಬಾರದು. ನಮ್ಮೊಳಗಿನ ಕಂಸನಾದ ದ್ವೇಷ, ಅಹಂಕಾರ, ಕ್ರೌರ್ಯವನ್ನು ಕೊಲ್ಲೋಣ. ಪ್ರೀತಿ, ಕರುಣೆ, ಧೈರ್ಯ, ಸತ್ಯ ಮತ್ತು ಧರ್ಮವನ್ನು ಜಾಗೃತಗೊಳಿಸೋಣ. ಏಕೆಂದರೆ ಕೃಷ್ಣನ ಜನನ ಕೇವಲ ಸಾವಿರಾರು ವರ್ಷಗಳ ಹಿಂದಿನ ಕಥೆಯಲ್ಲ. ಪ್ರತಿ ಬಾರಿಯು ಒಬ್ಬ ಮನುಷ್ಯ ಅನ್ಯಾಯದ ವಿರುದ್ಧ ಸಿಡಿದೆದ್ದಾಗ, ದ್ವೇಷದ ಬದಲು ಪ್ರೀತಿಯನ್ನು ಆರಿಸಿಕೊಂಡಾಗ, ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿದಾಗ, ಅಲ್ಲಿ ಕೃಷ್ಣ ಮತ್ತೆ ಹುಟ್ಟುತ್ತಾನಲ್ಲವೇ? ಜೀವನದಲ್ಲಿ ಎಷ್ಟೇ ಕತ್ತಲೆ ಬಂದರೂ ಹೆದರಬೇಡ. ಧರ್ಮದ ದಾರಿಯಲ್ಲಿ ನಡೆಯುತ್ತಿರು. ನಂಬಿಕೆ ಕಳೆದುಕೊಳ್ಳಬೇಡ. ಕತ್ತಲು ಕಳೆದು, ಬೆಳಕು ಮೂಡಲೇಬೇಕಲ್ಲವೇ? ಆ ಬೆಳಕು ನಮ್ಮ ಜೀವನದಲ್ಲಿ ಅನವರತವಿರಲಿ ಎಂದು ಶ್ರೀಕೃಷ್ಣ ಜನ್ಮಾಷ್ಟಮಿಯ ಹಾರ್ದಿಕ ಶುಭಾಶಯಗಳನ್ನು ಕೋರುತ್ತಾ ನಾರಿಯ ಸೀರೆ ಕದ್ದ ರಾಧೆಯ ಮನವ ಗೆದ್ದ, ಕಳ್ಳರ ಕಳ್ಳ ಕೃಷ್ಣನು ಬಂದ ಮೋಹದ ಮೋಡಿ ಹಾಕಿದ ಕೃಷ್ಣ ಮುರಾರಿಯನ್ನು ಸ್ಮರಿಸೋಣವೇ?

ತುಂಗ ಬಿಂಬ -ಪುಷ್ಪಲತಾ ಕೆ.ಎಸ್.ಹೆಗಡೆ

# ಹೊಕ್ರಾಣಿ ಯುವತಿ ಅತ್ಯಾಚಾರ-ಕೊಲೆ ಪ್ರಕರಣ: ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಗೆ ಆಗ್ರಹ



ಸಿರವಾರ: ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಯುವತಿಯ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿರುವ ಆರೋಪದ ಪ್ರಕರಣಕ್ಕೆ ಸಂಬಂಧಿಸಿದಂತೆ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಭವಿಷ್ಯ ಬೆಳಕು ಚಾರಿಟೇಬಲ್ ಸಂಸ್ಥೆ ಸರ್ಕಾರ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದೆ.

ಹೊಕ್ರಾಣಿ ಗ್ರಾಮದ ತಿಮ್ಮರೆಡ್ಡಿ ದಂಪತಿಯ ಪುತ್ರಿ ಕುಮಾರಿ ಆಶ್ವಿನಿ (19) ಅವರು ಆ.19ರಂದು ಸಂಜೆ 7 ಗಂಟೆ ಸುಮಾರಿಗೆ ಬಹಿರ್ದೆಸೆಗೆ ತೆರಳಿದ್ದ ವೇಳೆ ಗ್ರಾಮದ ಕೆಲ ಯುವಕರು ಆಕೆಯ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿ, ಮೃತದೇಹವನ್ನು ಗ್ರಾಮದ ಬಾವಿಯಲ್ಲಿ ಎಸೆದಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಘಟನಾ ಸ್ಥಳಕ್ಕೆ ಭವಿಷ್ಯ ಬೆಳಕು ಚಾರಿಟೇಬಲ್ ಸಂಸ್ಥೆಯ ಪದಾಧಿಕಾರಿಗಳು ಭೇಟಿ ನೀಡಿ, ಮೃತ ಆಶ್ವಿನಿ ಅವರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಮಾನವೀಯ ನೆಲೆಯಲ್ಲಿ ಸಂಸ್ಥೆಯ ವತಿಯಿಂದ ಕುಟುಂಬಕ್ಕೆ ₹25 ಸಾವಿರ ಆರ್ಥಿಕ ನೆರವು ನೀಡಿ ಧೈರ್ಯ ತುಂಬಿದರು.

ಇಂತಹ ಅಮಾನವೀಯ ಘಟನೆಗಳು ಸಮಾಜದಲ್ಲಿ ಮರುಕಳಿಸದಂತೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಪ್ರಕರಣದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ, ಆರೋಪ ಸಾಬೀತಾದಲ್ಲಿ ತಪ್ಪಿತಸ್ಥರಿಗೆ ಕಾನೂನಿನ ಪ್ರಕಾರ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಸಂಸ್ಥೆಯ ಪದಾಧಿಕಾರಿಗಳು ಆಗ್ರಹಿಸಿದರು.

ಅಲ್ಲದೆ, ಸಂತ್ರಸ್ತ ಕುಟುಂಬಕ್ಕೆ ಸರ್ಕಾರ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸುವುದರೊಂದಿಗೆ ನ್ಯಾಯ ದೊರಕಿಸಿಕೊಡಬೇಕು. ಮಹಿಳೆಯರು ಮತ್ತು ಯುವತಿಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಿ, ಇಂತಹ ಪ್ರಕರಣಗಳು ಮರುಕಳಿಸದಂತೆ ಪೊಲೀಸ್ ಇಲಾಖೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಭವಿಷ್ಯ ಬೆಳಕು ಚಾರಿಟೇಬಲ್ ಸಂಸ್ಥೆಯ ಅಧ್ಯಕ್ಷ ಗಿರೀಶ್ ನಲ್ಲುದ್ರಿ, ಸಂಯೋಜಕಿ ಬೇಗಂ ಅವಾಲ್ದಾರ್ ಉಮಾಲೂಟಿ, ವಿರೇಶ್ ಉಮಾಲೂಟಿ ಅಡಗಿ, ಹನುಮಂತಪ್ಪ ಗೋಮಾರ್ಶಿ, ಮಹಾನಂದ ಕುರುಕುಂದಿ, ಹನುಮೇಶ್ ಈಳಿಗರು, ಉಮಾಲೂಟಿ ನೀರುಪಾದಿ, ಶಾಲಮಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸೆ.4ರಂದು ವಿಕಲಚೇತನ ಉದ್ಯಮಶೀಲತೆ, ಜೀವನೋಪಾಯ ಮೇಳ



ರಾಯಚೂರು, ಸೆ.2: ವಿಕಲಚೇತನರು ಸ್ವಾವಲಂಬಿ ಜೀವನ ನಡೆಸಲು ಅಗತ್ಯವಿರುವ ಉದ್ಯಮಶೀಲತೆ, ಕೌಶಲ್ಯಾಭಿವೃದ್ಧಿ, ಹಣಕಾಸು ನೆರವು, ತಂತ್ರಜ್ಞಾನ ಹಾಗೂ ಮಾರುಕಟ್ಟೆ ಸಂಪರ್ಕ ಒದಗಿಸುವ ಉದ್ದೇಶದಿಂದ ಸೆಪ್ಟೆಂಬರ್ 4ರಂದು ನಗರದ ಪಂ. ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವಿಕಲಚೇತನ ಉದ್ಯಮಶೀಲತೆ ಮತ್ತು ಜೀವನೋಪಾಯ ಮೇಳ ಆಯೋಜಿಸಲಾಗಿದೆ ಎಂದು ಸೆಲ್ಕೋ ಫೌಂಡೇಶನ್ ವ್ಯವಸ್ಥಾಪಕ ಫಣಿ ಸಿಂಗ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇಳದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ 500ಕ್ಕೂ ಹೆಚ್ಚು ವಿಕಲಚೇತನರು ಭಾಗವಹಿಸುವ ನಿರೀಕ್ಷೆಯಿದೆ. ವಿಕಲಚೇತನರಿಗೆ ಜೀವನೋಪಾಯ ಮತ್ತು ಉದ್ಯಮಶೀಲತಾ ಅವಕಾಶಗಳನ್ನು ಪರಿಚಯಿಸುವುದರ ಜೊತೆಗೆ, ಸ್ವಂತ ಉದ್ಯಮ ಆರಂಭಿಸಲು ಅಗತ್ಯವಿರುವ ಮಾರ್ಗದರ್ಶನ ಹಾಗೂ ಸಂಪರ್ಕ ಕಲ್ಪಿಸುವುದು ಮೇಳದ ಪ್ರಮುಖ ಉದ್ದೇಶವಾಗಿದೆ ಎಂದರು.

ಸೂಕ್ತ ಹಣಕಾಸು ನೆರವು, ಸಹಾಯಕ ತಂತ್ರಜ್ಞಾನ, ಕೌಶಲ್ಯ ತರಬೇತಿ ಹಾಗೂ ಮಾರುಕಟ್ಟೆ ಸಂಪರ್ಕ ದೊರೆತರೆ ವಿಕಲಚೇತನರು ಯಶಸ್ವಿ ಉದ್ಯಮಗಳನ್ನು ಸ್ಥಾಪಿಸಿ ಸುಸ್ಥಿರ ಜೀವನೋಪಾಯ ರೂಪಿಸಿಕೊಳ್ಳುವ ಸಾಮರ್ಥ್ಯ ಹೊಂದಿದ್ದಾರೆ. ಆದರೆ ಸರ್ಕಾರಿ ಯೋಜನೆಗಳು ಹಾಗೂ ವಿವಿಧ ಬೆಂಬಲ ವ್ಯವಸ್ಥೆಗಳ ಕುರಿತು ಸಮರ್ಪಕ ಮಾಹಿತಿ ಮತ್ತು ಅವುಗಳಿಗೆ ಸುಲಭ ಪ್ರವೇಶದ ಕೊರತೆಯಿಂದ ಅನೇಕರು ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ವಿಕಲಚೇತನರು, ಜಿಲ್ಲಾಡಳಿತ, ವಿವಿಧ ಸರ್ಕಾರಿ ಇಲಾಖೆಗಳು, ಬ್ಯಾಂಕುಗಳು ಮತ್ತು ಹಣಕಾಸು ಸಂಸ್ಥೆಗಳು, ತಂತ್ರಜ್ಞಾನ ಹಾಗೂ ಯಂತ್ರೋಪಕರಣ ಪೂರೈಕೆದಾರರು, ತರಬೇತಿ ಮತ್ತು ಉದ್ಯಮ ಅಭಿವೃದ್ಧಿ ಸಂಸ್ಥೆಗಳನ್ನು ಒಂದೇ ವೇದಿಕೆಗೆ ತರಲಾಗುತ್ತಿದೆ. ಉದ್ಯಮ ಆರಂಭಿಸಲು ಆಸಕ್ತಿ ಹೊಂದಿರುವವರಿಗೆ ಅಗತ್ಯ ಮಾಹಿತಿ, ಸಲಹೆ, ಮಾರ್ಗದರ್ಶನ ಮತ್ತು ಸಂಸ್ಥೆಗಳ ಸಂಪರ್ಕವನ್ನು ಒಂದೇ ಸ್ಥಳದಲ್ಲಿ ಒದಗಿಸಲಾಗುವುದು ಎಂದರು.

ಮೇಳದಲ್ಲಿ ಸ್ಥಳೀಯವಾಗಿ ಕೈಗೊಳ್ಳಬಹುದಾದ ವಿವಿಧ ಉದ್ಯಮ ಮಾದರಿಗಳು, ಅವುಗಳಿಗೆ ಅಗತ್ಯವಿರುವ ಯಂತ್ರೋಪಕರಣಗಳು ಹಾಗೂ ಸಹಾಯಕ ತಂತ್ರಜ್ಞಾನಗಳ ಪ್ರದರ್ಶನ ಮತ್ತು ಪ್ರಾತ್ಯಕ್ಷಿಕೆ ನಡೆಯಲಿದೆ. ಈಗಾಗಲೇ ಯಶಸ್ವಿಯಾಗಿ ಉದ್ಯಮ ನಡೆಸುತ್ತಿರುವ ವಿಕಲಚೇತನ ಉದ್ಯಮಿಗಳೊಂದಿಗೆ ಸಂವಾದ ನಡೆಸಲು ಸಹ ಅವಕಾಶ ಕಲ್ಪಿಸಲಾಗುತ್ತದೆ ಎಂದು ತಿಳಿಸಿದರು.

ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳ ಕುರಿತು ಮಾಹಿತಿ ನೀಡಲು ಪ್ರತ್ಯೇಕ ಸಹಾಯ ಕೇಂದ್ರ, ಉದ್ಯಮಶೀಲತಾ ಸಾಲ, ಸಬ್ಸಿಡಿ, ವಿಮೆ ಮತ್ತು ಸಾಲ ಸೌಲಭ್ಯಗಳ ಕುರಿತು ಮಾಹಿತಿ ನೀಡುವ ಹಣಕಾಸು ಕೇಂದ್ರ ಹಾಗೂ ಯಂತ್ರೋಪಕರಣ ಮತ್ತು ಜೀವನೋಪಾಯ ಪರಿಹಾರಗಳಿಗೆ ಸಂಬಂಧಿಸಿದ ವಿವಿಧ ಮಳಿಗೆಗಳು ಮೇಳದಲ್ಲಿ ಇರಲಿವೆ.

ಮೇಳದ ಮೂಲಕ ಗುರುತಿಸಲಾಗುವ ಆಸಕ್ತ ವಿಕಲಚೇತನರನ್ನು ಮುಂದಿನ ಹಂತದಲ್ಲಿ ಮೌಲ್ಯಮಾಪನ, ವ್ಯವಹಾರ ಯೋಜನೆ ಸಿದ್ಧತೆ, ತರಬೇತಿ, ಉದ್ಯಮ ಅಭಿವೃದ್ಧಿ, ಹಣಕಾಸು ಸಂಸ್ಥೆಗಳೊಂದಿಗೆ ಸಂಪರ್ಕ ಹಾಗೂ ಉದ್ಯಮ ಸ್ಥಾಪನೆಗೆ ಅಗತ್ಯವಿರುವ ನೆರವಿನೊಂದಿಗೆ ಮುನ್ನಡೆಸಲಾಗುವುದು ಎಂದು ಫಣಿ ಸಿಂಗ್ ತಿಳಿಸಿದರು.

ಸೆ.4ರಂದು ಬೆಳಿಗ್ಗೆ 9.30ಕ್ಕೆ ನೋಂದಣಿ ಪ್ರಕ್ರಿಯೆ ಆರಂಭವಾಗಲಿದ್ದು, ಬೆಳಿಗ್ಗೆ 10 ಗಂಟೆಗೆ ಸ್ವಾಗತ ಭಾಷಣದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ದೊರೆಯಲಿದೆ. ಬಳಿಕ ಉದ್ಘಾಟನಾ ಭಾಷಣ, ವಿಶೇಷ ಉಪನ್ಯಾಸಗಳು ಹಾಗೂ ವಿಕಲಚೇತನರ ಸಮಾವೇಶಿತ ಜೀವನೋಪಾಯ ಕುರಿತು ಚರ್ಚೆಗಳು ನಡೆಯಲಿವೆ. ಬೆಳಿಗ್ಗೆ 11.30ಕ್ಕೆ ಅಕಾಂಕ್ಷೆಯಿಂದ ಉದ್ಯಮದತ್ತ: ಹಣಕಾಸು ಮತ್ತು ತಂತ್ರಜ್ಞಾನದ ಮೂಲಕ ವಿಕಲಚೇತನ ಉದ್ಯಮಿಗಳಿಗೆ ಅವಕಾಶ ವಿಷಯದ ಕುರಿತು ವೇದಿಕೆ ಚರ್ಚೆ ನಡೆಯಲಿದೆ.

ಜಿಲ್ಲಾಡಳಿತ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು, ಬ್ಯಾಂಕ್ ಪ್ರತಿನಿಧಿಗಳು, ಸಹಾಯಕ ತಂತ್ರಜ್ಞಾನ ಹಾಗೂ ಯಂತ್ರೋಪಕರಣ ಪೂರೈಕೆದಾರರು, ತರಬೇತಿ ಸಂಸ್ಥೆಗಳು ಮತ್ತು ಯಶಸ್ವಿ ವಿಕಲಚೇತನ ಉದ್ಯಮಿಗಳು ಮೇಳದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಧ್ಯಾಹ್ನ ಹವಾಮಾನ ಸ್ನೇಹಿ ಜೀವನೋಪಾಯ ಪರಿಹಾರಗಳು ಸೇರಿದಂತೆ ವಿವಿಧ ಜೀವನೋಪಾಯ ಮಾದರಿಗಳ ಪ್ರದರ್ಶನ ಹಾಗೂ ಪ್ರಾತ್ಯಕ್ಷಿಕೆ ನಡೆಯಲಿದೆ ಎಂದರು.

ವಿಕಲಚೇತನರನ್ನು ಕೇವಲ ಕಲ್ಯಾಣ ಯೋಜನೆಗಳ ಫಲಾನುಭವಿಗಳಾಗಿ ನೋಡುವ ಬದಲು, ಅವರನ್ನು ಉದ್ಯಮಿಗಳು ಹಾಗೂ ಆರ್ಥಿಕ ಚಟುವಟಿಕೆಗಳ ಸಕ್ರಿಯ ಭಾಗಿಗಳನ್ನಾಗಿ ರೂಪಿಸುವ ನಿಟ್ಟಿನಲ್ಲಿ ಈ ಮೇಳ ಮಹತ್ವದ ಹೆಜ್ಜೆಯಾಗಲಿದೆ ಎಂದು ಫಣಿ ಸಿಂಗ್ ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ವಿನೋದ್ ಪ್ರತಾಪ್ ಉಪಸ್ಥಿತರಿದ್ದರು.

# ಶ್ರೀ ವೀರಭದ್ರೇಶ್ವರ ಸ್ವಾಮಿ ಪಲ್ಲಕ್ಕಿ ಉತ್ಸವ ವಿಜೃಂಭಣೆ



ಹಟ್ಟಿ ಚಿನ್ನದ ಗಣಿ, ಸೆ. 2: ಹಟ್ಟಿ ಸಮೀಪದ ಗೌಡೂರು ಗ್ರಾಮದ ಆರಾಧ್ಯ ದೈವ ಶ್ರೀ ವೀರಭದ್ರೇಶ್ವರ ಸ್ವಾಮಿಯ ಪಲ್ಲಕ್ಕಿ ಉತ್ಸವ, ಪುರವಂತಿಗೆ ಸೇವೆ, ನಂದಿಕೋಲು ಕುಣಿತ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಮಂಗಳವಾರ ಭಕ್ತಿ, ಶ್ರದ್ಧೆ ಹಾಗೂ ವಿಜೃಂಭಣೆಯಿಂದ ಜರುಗಿದವು.

ಪ್ರತಿ ವರ್ಷದ ಸಂಪ್ರದಾಯದಂತೆ ಶ್ರಾವಣ ಮಾಸದ ಮೊದಲ, ಎರಡನೇ ಹಾಗೂ ಮೂರನೇ ಸೋಮವಾರದಂದು ಶ್ರೀ ವೀರಭದ್ರೇಶ್ವರ ಸ್ವಾಮಿಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ, ವಿಶೇಷ ಪುಷ್ಪಾಲಂಕಾರ ಹಾಗೂ ನಿತ್ಯ ಭಜನೆ ಸೇರಿದಂತೆ ಹಲವು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು.

ಮೂರನೇ ಸೋಮವಾರದಂದು ಶ್ರೀ ವೀರಭದ್ರೇಶ್ವರ ಸ್ವಾಮಿಯ ಪಲ್ಲಕ್ಕಿಯು ಗಂಗಾಪೂಜೆಗಾಗಿ ಗುರುಗುಂಟಾ ಗ್ರಾಮದ ಕೃಷ್ಣಾ ನದಿಗೆ ತೆರಳಿತ್ತು. ಅಲ್ಲಿ ಗಂಗಾಪೂಜೆ ನೆರವೇರಿಸಿದ ಬಳಿಕ ಮರಳುವ ಸಂದರ್ಭದಲ್ಲಿ ಗುರುಗುಂಟಾ ಗ್ರಾಮದಲ್ಲಿ ಬೆಳಗಿನ ಜಾವದವರೆಗೂ ಭಕ್ತರಿಂದ ಪುರವಂತಿಗೆ ಸೇವೆ ನಡೆಯಿತು.

ಮಂಗಳವಾರ ಪಲ್ಲಕ್ಕಿಯು ಪುರವಂತಿಗೆ ಸೇವೆ ಹಾಗೂ ನಂದಿಕೋಲು ಕುಣಿತದೊಂದಿಗೆ ಗ್ರಾಮದ ಪ್ರಮುಖ ರಾಜಬೀದಿಗಳಲ್ಲಿ ಸಂಚರಿಸಿ ದೇವಸ್ಥಾನದ ಆವರಣ ತಲುಪಿತು. ಈ ವೇಳೆ ದೇವಸ್ಥಾನದ ಪ್ರಾಂಗಣದಲ್ಲಿ ಹರಕೆ ಹೊತ್ತ ಭಕ್ತರು 2001 ಮೊಳ ದಾರ ಎಳೆಯುವ ವಿಶೇಷ ಪವಾಡಸದೃಶ ಆಚರಣೆಯಲ್ಲಿ ಭಾಗವಹಿಸಿದರು. ಸಾವಿರಾರು ಭಕ್ತರು ಈ ಅಪರೂಪದ ಧಾರ್ಮಿಕ ಕಾರ್ಯಕ್ರಮವನ್ನು ಕಣ್ತುಂಬಿಕೊಂಡರು.

ಹರಕೆ ಹೊತ್ತ ಭಕ್ತರು ಶಸ್ತ್ರಧಾರಣೆ ಮಾಡಿಕೊಂಡು, ಸಾವಿರಾರು ದೂಳುಗಾಯಿ ಹೊಡೆಯುವ ಮೂಲಕ ತಮ್ಮ ಹರಕೆಗಳನ್ನು ತೀರಿಸಿದರು. ನಂತರ ಶ್ರೀ ವೀರಭದ್ರೇಶ್ವರ ಸ್ವಾಮಿಯ ಪಲ್ಲಕ್ಕಿಯನ್ನು ಗರ್ಭಗುಡಿಗೆ ಕೊಂಡೊಯ್ಯಲಾಯಿತು. ಮಹಾಮಂಗಳಾರತಿಯೊಂದಿಗೆ ಧಾರ್ಮಿಕ ಕಾರ್ಯಕ್ರಮಗಳು ಸಂಪನ್ನಗೊಂಡವು.

ಉತ್ಸವಕ್ಕೆ ಆಗಮಿಸಿದ್ದ ಸಹಸ್ರಾರು ಭಕ್ತರಿಗೆ ದಾಸೋಹದ ಮೂಲಕ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ರಾಜಾ ಸೇತುರಾಮ ನಾಯಕ, ವೀರನಗೌಡ ಪೊಲೀಸ್ ಪಾಟೀಲ್, ರಾಜಾ ಲಕ್ಷ್ಮಣ ನಾಯಕ, ರುದ್ರಣ್ಣ ಸಾಹುಕಾರ, ರಾಚಯ್ಯ ಸ್ವಾಮಿ ಗಣಾಚಾರಿ, ಪ್ರಧಾನ ಅರ್ಚಕ ತೀರ್ಥಯ್ಯ ಸ್ವಾಮಿ, ಮಲ್ಲಣ್ಣ ಕೋಳುರು ಸೇರಿದಂತೆ ಯಾದಗಿರಿ, ಕಲಬುರಗಿ ಹಾಗೂ ಬಾಗಲಕೋಟೆ ಜಿಲ್ಲೆಗಳಿಂದ ಆಗಮಿಸಿದ್ದ ಭಕ್ತರು ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಹಸ್ರಾರು ಭಕ್ತರು ಭಾಗವಹಿಸಿದ್ದರು.

ಉತ್ಸವದ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಹಟ್ಟಿ ಪೊಲೀಸ್ ಠಾಣೆಯ ಸಿಬ್ಬಂದಿಯಿಂದ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿತ್ತು.

# ಕೊನೆಯ ಭಾಗದ ರೈತರಿಗೆ ನೀರು ತಲುಪಲು ಶ್ರಮಿಸಿ: ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್



ರಾಯಚೂರು ಸೆಪ್ಟಂಬರ್ 02 (ಕರ್ನಾಟಕ ವಾರ್ತೆ): ಕೊನೆಯ ಭಾಗದ ರೈತರಿಗೆ ತುಂಗಭದ್ರಾ ಎಡದಂಡೆ ನಾಲೆಯ ನೀರನ್ನು ಒದಗಿಸಲು ಈಗಾಗಲೇ ಅಧಿಕಾರಿಗಳ ತಂಡಗಳನ್ನು ರಚಿಸಲಾಗಿದ್ದು, ರೈತ ಮುಖಂಡರು ಅಧಿಕಾರಿಗಳೊಂದಿಗೆ ಸಹಕರಿಸಿ ಕೊನೆಯ ಭಾಗದ ರೈತರಿಗೆ ನೀರು ತಲುಪಲು ಶ್ರಮಿಸಬೇಕೆಂದು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಹೇಳಿದರು.

ಸೆಪ್ಟೆಂಬರ್ 02ರ ಬುಧವಾರ ದಂದು ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನೀರು ನಿರ್ವಹಣೆ ಕುರಿತು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೀರು ಪೋಲ್ ಆಗುವಂತಹ ಪ್ರದೇಶಗಳನ್ನು ಅಧಿಕಾರಿಗಳ ಗಮನಕ್ಕೆ ರೈತ ಮುಖಂಡರು ತರಬೇಕು. ಕಾಲುವೆ ಪ್ರದೇಶದಲ್ಲಿ ಅಕ್ರಮವಾಗಿ ನೀರು ತೆಗೆಯುವರ ವಿರುದ್ಧ ಪ್ರಕರಣ ದಾಖಲೆ ಮಾಡಬೇಕು. ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು. ಅಲ್ಲದೆ ರೈತರು ಕೇವಲ ಭತ್ತವನ್ನು ಬೆಳೆಯದೆ ಬೇರೆ, ಬೇರೆ ಬೆಳೆಗಳನ್ನು ಬೆಳೆಯಲು ಗಮನಹರಿಸುವಂತೆ ಸಂಬಧಿಸಿದ ಅಧಿಕಾರಿಗಳು ರೈತರಿಗೆ ಜಾಗೃತಿ ಮೂಡಿಸಬೇಕು. ಕಾಲುವೆ ಪಕ್ಕದಲ್ಲಿ ಇರುವ ಕೆರೆಗಳಿಗೆ ನೀರು ಹೋಗದಂತೆ ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮವಹಿಸಬೇಕು. ವಿವಿಧ ಇಲಾಖೆಯ ಅಧಿಕಾರಿಗಳ ತಂಡ ಕಾಲುವೆಗಳ ಮೇಲೆ ಸರಿಯಾಗಿ ಮೇಲುಸ್ತುವಾರಿ ಮಾಡಬೇಕು. ನೀರಾವರಿ ಸಲಹಾ ಸಮಿತಿ ಸಭೆಯ ನಂತರ ಜಿಲ್ಲೆಯಲ್ಲಿ ದಾಖಲಾದ ಪ್ರಕರಣಗಳ ಮಾಹಿತಿಯನ್ನು ಅಧಿಕಾರಿಗಳಿಂದ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಪಡೆದರು.

ಅನಧಿಕೃತವಾಗಿ ನೀರನ್ನು ಬಳಕೆಯಾಗುವ ಪ್ರದೇಶದಲ್ಲಿ ಜೆಸ್ಕಾಂನವರು ವಿದ್ಯುತ್ ಟಿಸಿಗಳನ್ನು ತೆಗೆಸಿ, ಜಿಲ್ಲೆಯಲ್ಲಿ ವಿಶೇಷವಾಗಿ ಸಿರವಾರ ಹಾಗೂ ಮಸ್ಕಿ ಭಾಗದಲ್ಲಿ ಹೆಚ್ಚಿನ ಕಾಳಜಿ ವಹಿಸಬೇಕು. ಅಲ್ಲದೆ ಅಧಿಕಾರಿಗಳು ಚೆನ್ನಾಗಿ ಕೆಲಸ ಮಾಡದಿದ್ದರೆ ಮುಂದಿನ ದಿನಗಳಲ್ಲಿ ಇದರ ಗಂಬೀರ ಪರಿಣಾಮವನ್ನು ಎದುರಿಸಬೇಕಾಗುತ್ತದೆ. ಎಲ್ಲೆಲಿ ಅಕ್ರಮ ನೀರು ಸಾಗಣೆ ಮಾಡುತ್ತಿದ್ದಾರೆ. ಅಂತಹ ಪ್ರದೇಶದಲ್ಲಿ ಅಧಿಕಾರಿಗಳು ಮುಲ್ಲಾಜಿ ಇಲ್ಲದೆ ಕ್ರಮ ಕೈಗೊಳ್ಳಬೇಕು ಎಂದರು.

ನೀರು ಪೋಲಾಗುತ್ತಿರುವುದು ಮತ್ತು ಅಕ್ರಮ ನಡೆಯಲ್ಲಿರುವುದು ನೀರಾವರಿ ಇಲಾಖೆಗೆ ಮುಜುಗರದ ಸಂಗತಿಯಾಗಿದ್ದು, ಪಾರದರ್ಶಕತೆಗೆ ಧಕ್ಕೆ ಬಾರದಂತೆ ಕೆಲಸ ಮಾಡಬೇಕು. ಅಗತ್ಯವಿದ್ದರೆ ಸೂಕ್ತ ಪೊಲೀಸ್ ರಕ್ಷಣೆ ಹಾಗೂ ಹೆಚ್ಚುವರಿ ಸಿಬ್ಬಂದಿಯನ್ನು ನೀಡಲಾಗುವುದು. ತಕ್ಷಣವೇ ಅಕ್ರಮ ಪೈಪ್‌ಲೈನ್‌ಗಳನ್ನು ತೆರವುಗೊಳಿಸಿ, ಅಕ್ರಮ ನೀರು ಎತ್ತುವಿಕೆಯನ್ನು ತಡೆಯಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಪ್ರಾದೇಶಿಕ ಆಯುಕ್ತರು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿಗಳಾ ಪೂವಿತಾ ಎಸ್. ಅವರು ಮಾತನಾಡಿ, ತುಂಗಭದ್ರಾ ಎಡದಂಡೆ ನಾಲೆಯು ಮುನಿರಾಬಾದ್‌ನ ಡ್ಯಾಂ ನಿಂದ ಪ್ರಾರಂಭವಾಗಿ ಕೊಪ್ಪಳ, ಗಂಗಾವತಿ, ಕಾರಟಗಿ, ಸಿಂಧನೂರು, ಮಸ್ಕಿ, ಮಾನ್ವಿ, ಸಿರವಾರ, ದೇವದುರ್ಗ ಮತ್ತು ರಾಯಚೂರು ತಾಲ್ಲೂಕುಗಳಲ್ಲಿ ಬೆಳೆಗಳಿಗೆ ನೀರನ್ನು ಕೊಡುತ್ತಿದ್ದು, ಮೈಲು 0.00 ರಿಂದ ಮೈಲು 141ರವರೆಗೆ ವಿಸ್ತರಣೆ ಇರುತ್ತದೆ. ಈ ಅಚ್ಚುಕಟ್ಟು ಪ್ರದೇಶಗಳು ಮೂರು ವಿಭಾಗವಾರು ಇದ್ದು, ಮುಂಗಾರು ಮತ್ತು ಹಿಂಗಾರಿಗೆ ಒಟ್ಟು 602699 ಎಕರೆಗಳಲ್ಲಿ 51958 ಎಕರೆಗೆ ಮಾತ್ರ ಭತ್ತ ಬೆಳೆಯಲು ಅವಕಾಶವಿರುತ್ತದೆ. ಆದರೆ ಬೆಳೆಯುವ ಭತ್ತದ ಪ್ರದೇಶ ಈಗ ಮಿತ ಬೆಳೆಗಳನ್ನು ಅಂದಾಜು 3,00.000 ದಾಟಿರುತ್ತದೆ ಎಂದರು.

ಪ್ರತಿ ಕಾಲುವೆಗಳು ಈಗಾಗಲೇ ಆಧುನೀಕರಣವಾಗಿದ್ದು, ಆಧುನೀಕರಣಗೊಳ್ಳುವ ಮೊದಲು ಇದ್ದ ಪ್ರದೇಶಕ್ಕಿಂತ ಈಗ ಹೆಚ್ಚಿನ ಭತ್ತ ಬೆಳೆಯುವ ಪ್ರದೇಶಗಳಾಗಿದ್ದು, ಇನ್ನೂ ಕೆಲವು ರೈತರು ಬೇರೆ ಬೆಳೆಗಳು ಬೆಳೆಯುವ ಬದಲು ಭತ್ತವನ್ನು ಬೆಳೆಯಲು ತಯಾರಿಸಿಕೊಳ್ಳುತ್ತಿರುವುದು ಕಂಡುಬದಿರುತ್ತದೆ ಎಂದರು.

ಈ ವೇಳೆ ಕೊಪ್ಪಳ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಸುರೇಶ ಬಿ.ಇಟ್ನಾಳ ಅವರು ಮಾತನಾಡಿ, ತುಂಗಭದ್ರಾ ಎಡದಂಡೆ ನಾಲೆಯ ನೀರನ್ನು ಸಮಗ್ರವಾಗಿ ಒದಗಿಸಲು ರಾಯಚೂರಿನ ನೀರಾವರಿ ಇಲಾಖೆಯ ಅಧಿಕಾರಿಗಳನ್ನು ಕೊಪ್ಪಳ ಜಿಲ್ಲೆಗೆ ಕರ್ತವ್ಯಗೆ ನಿಯೋಜಿಸಿ, ಕೊಪ್ಪಳ ಜಿಲ್ಲೆಯ ನೀರಾವರಿ ಇಲಾಖೆಯ ಅಧಿಕಾರಿಗಳನ್ನು ರಾಯಚೂರಿಗೆ ನಿಯೋಜಿಸಿದಲ್ಲಿ ರೈತರಿಗೆ ಅನುಕೂಲವಾಗಲಿದೆ. ಅಲ್ಲದೆ ಅಧಿಕಾರಿಗಳು ಬಲ್ಯಾಡ ರೈತರ ಒತ್ತಡಕ್ಕೆ ಒಳಗಾಗುವುದಿಲ್ಲ ಎಂದು ಸಭೆಗೆ ತಮ್ಮ ಅಭಿಪ್ರಾಯವನ್ನು ನೀಡಿದರು.

ಈ ವೇಳೆ ವಿವಿಧ ರೈತ ಮುಖಂಡರು ಮಾತನಾಡಿ, ಸರಕಾರಿ ಜಮೀನು ಮತ್ತು ಕಾಲುವೆ ಗಡಿಭಾಗಗಳಲ್ಲಿ ಅಕ್ರಮವಾಗಿ ಕೆರೆಗಳನ್ನು ತೋಡಿ ನೀರು ಕದಿಯಲಾಗುತ್ತಿದೆ. ಈ ಬಗ್ಗೆ ಸೂಕ್ತ ಕ್ರಮ ವಹಿಸಬೇಕೆಂದು ಜಿಲ್ಲಾಡಳಿತಕ್ಕೆ ಮಾನವಿ ಮಾಡಿದ ಅವರು ಕಳೆದ ವರ್ಷ ಡ್ಯಾಂ ಗೇಟ್ ರಿಪೇರಿ ಕಾರಣ ಕೆಳ ಭಾಗದ ರೈತರಿಗೆ ನೀರು ಬರಲಿಲ್ಲ. ಈ ಸಲ ಕೆಳಭಾಗದ ರೈತರಿಗೆ ಇನ್ನೂ ನೀರು ತಲುಪುತ್ತಿಲ್ಲ. ಅದರಲ್ಲೂ ಈಗ ಬರ ಬೇರೆ ಇದೆ. ಕಂದಾಯ ಮತ್ತು ಜೆಸ್ಕಾಂ ಅಧಿಕಾರಿಗಳು ಕ್ರಮ ವಹಿಸಿ ಕೆಳ ಭಾಗದ ರೈತರಿಗೆ ನೀರು ಒದಗಿಸಬೇಕೆಂದರು.

ಇದೇ ಸಂದರ್ಭದಲ್ಲಿ ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಅಪರ ಜಿಲ್ಲಾಧಿಕಾರಿ ಶಿವಾನಂದ, ನೀರಾವರಿ ಇಲಾಖೆಯ ಸಿಇ ಮನೋಜ್ ಕುಮಾರ್, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣ್ಣೆಪ್ಪ ಕಲಶೆಟ್ಟಿ, ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ, ಬಸವರಾಜ ಬ್ಯಾಗವಾಟ್, ಮುಖಂಡರಾದ ಗಂಗಾಧರ್ ನಾಯಕ, ರೈತರ ಮುಖಂಡ ಚಾಮರಸ ಮಾಲಿಪಾಟೀಲ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ವಿವಿಧ ಪ್ರಗತಿ ಪರ ರೈತರು, ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಉಪಾಹಾರ ಸೇವಿಸಿದ 34 ವಿದ್ಯಾರ್ಥಿಗಳು ಅಸ್ವಸ್ಥ: ಆಸ್ಪತ್ರೆಗೆ ದಾಖಲು



ಮಾನ್ವಿ: ಪಟ್ಟಣದ ಮುಸ್ಟೂರು ರಸ್ತೆಯಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಬುಧವಾರ ಬೆಳಿಗ್ಗೆ ಉಪಾಹಾರ ಸೇವಿಸಿದ ಬಳಿಕ ಹಲವು ವಿದ್ಯಾರ್ಥಿಗಳು ಅಸ್ವಸ್ಥಗೊಂಡಿದ್ದು, 34 ವಿದ್ಯಾರ್ಥಿಗಳನ್ನು ಪಟ್ಟಣದ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಉಪಾಹಾರ ಸೇವಿಸಿದ ಕೆಲವೇ ಸಮಯದಲ್ಲಿ ವಿದ್ಯಾರ್ಥಿಗಳಲ್ಲಿ ತೀವ್ರ ಹೊಟ್ಟೆನೋವು, ಭೇದಿ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡಿವೆ. ಈ ಕುರಿತು ವಸತಿ ಶಾಲೆಯ ಅಧಿಕಾರಿಗಳು ತಕ್ಷಣ ವೈದ್ಯರಿಗೆ ಮಾಹಿತಿ ನೀಡಿದ್ದು, ಪಟ್ಟಣದ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಮಕ್ಕಳ ತಜ್ಞ ಹಾಗೂ ವೈದ್ಯಾಧಿಕಾರಿ ಡಾ. ಶರಣಪ್ಪ ನೇತೃತ್ವದ ವೈದ್ಯರ ತಂಡ ವಸತಿ ಶಾಲೆಗೆ ತೆರಳಿ ಅಸ್ವಸ್ಥ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ಚಿಕಿತ್ಸೆ ನೀಡಿದೆ.

ಅಸ್ವಸ್ಥಗೊಂಡ ವಿದ್ಯಾರ್ಥಿಗಳ ಪೈಕಿ 12 ಮಂದಿಗೆ ವಸತಿ ಶಾಲೆಯಲ್ಲಿಯೇ ಚಿಕಿತ್ಸೆ ನೀಡಲಾಗಿದ್ದು, ಹೆಚ್ಚಿನ ಆರೋಗ್ಯ ಸಮಸ್ಯೆ ಕಂಡುಬಂದ 12 ವಿದ್ಯಾರ್ಥಿನಿಯರು ಹಾಗೂ 22 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 34 ಮಂದಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಿಸಲಾಗಿದೆ. ವೈದ್ಯರು ಅಗತ್ಯ ಚಿಕಿತ್ಸೆ ನೀಡುತ್ತಿದ್ದು, ವಿದ್ಯಾರ್ಥಿಗಳ ಆರೋಗ್ಯದಲ್ಲಿ ಚೇತರಿಕೆ ಕಂಡುಬರುತ್ತಿದೆ.

ಈ ಕುರಿತು ಡಾ. ಶರಣಪ್ಪ ಮಾತನಾಡಿ, "ವಸತಿ ಶಾಲೆಯಲ್ಲಿ ಬೆಳಿಗ್ಗೆ ಉಪಾಹಾರ ಸೇವಿಸಿದ ಬಳಿಕ ಮಕ್ಕಳಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡಿರುವ ಮಾಹಿತಿ ತಿಳಿಯುತ್ತಿದ್ದಂತೆ ವೈದ್ಯರ ತಂಡದೊಂದಿಗೆ ಸ್ಥಳಕ್ಕೆ ತೆರಳಿ ಮಕ್ಕಳ ಆರೋಗ್ಯ ತಪಾಸಣೆ ನಡೆಸಿ ಚಿಕಿತ್ಸೆ ನೀಡಲಾಗಿದೆ. ಹೆಚ್ಚಿನ ಆರೋಗ್ಯ ಸಮಸ್ಯೆ ಕಂಡುಬಂದ 34 ವಿದ್ಯಾರ್ಥಿಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಎಲ್ಲರೂ ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ ಹಾಗೂ ಚೇತರಿಸಿಕೊಳ್ಳುತ್ತಿದ್ದಾರೆ'' ಎಂದು ತಿಳಿಸಿದರು.

ಆಸ್ಪತ್ರೆಗೆ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ. ಭೇಟಿ ನೀಡಿ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ರಾಜ್ಯ ಯುವ ಘಟಕದ ಉಪಾಧ್ಯಕ್ಷ ರಾಜಾ ರಾಮಚಂದ್ರ ನಾಯಕ, ಎಚ್. ಮೌನೇಶಗೌಡ ಸೇರಿದಂತೆ ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು.

# ಜಾಲಹಳ್ಳಿ ಗ್ರಾಮದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಡಿವೈಎಫ್‌ಐ ಒತ್ತಾಯ



ಜಾಲಹಳ್ಳಿ: ಗ್ರಾಮದ ವಿವಿಧ ವಾರ್ಡ್‌ಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಂತೆ ಒತ್ತಾಯಿಸಿ ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (DYFI) ಜಾಲಹಳ್ಳಿ ವಲಯ ಸಮಿತಿ ವತಿಯಿಂದ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಗ್ರಾಮದ 5ನೇ ವಾರ್ಡ್‌ನಲ್ಲಿ ಬಾಕಿ ಉಳಿದಿರುವ ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಿ ರಸ್ತೆ ನಿರ್ಮಾಣ ಮಾಡಬೇಕು. 8ನೇ ವಾರ್ಡ್‌ನ ಹೆಚ್ .ಬಿ.ಎಸ್. ತಳವಾರ ಓಣಿಯಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು ಹಾಗೂ ಇದೇ ವಾರ್ಡ್‌ನಲ್ಲಿರುವ ಹೈಟೆಕ್ ಶೌಚಾಲಯಕ್ಕೆ ಸಮರ್ಪಕ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಇದಲ್ಲದೆ, 9ನೇ ವಾರ್ಡ್‌ನಿಂದ ಉಪ್ಪಾರ ಸಮುದಾಯದವರು ವಾಸಿಸುವ ಪ್ರದೇಶದವರೆಗೆ ಹಾಗೂ ಈಗಾಗಲೇ ಚರಂಡಿ ನಿರ್ಮಾಣಗೊಂಡಿರುವ ಪ್ರದೇಶಗಳಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಬೇಕು ಎಂದು ಆಗ್ರಹಿಸಲಾಗಿದೆ.

ಗ್ರಾಮದ ಜನರಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಆಡಳಿತವು ಕೂಡಲೇ ಕ್ರಮ ಕೈಗೊಂಡು ಕಾಮಗಾರಿಗಳನ್ನು ಶೀಘ್ರ ಆರಂಭಿಸಬೇಕು. ಮನವಿಗೆ ಸ್ಪಂದಿಸದೆ ಕಾಮಗಾರಿಗಳನ್ನು ಕೈಗೊಳ್ಳಲು ವಿಳಂಬ ಮಾಡಿದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದು ಡಿವೈಎಫ್‌ಐ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಡಿವೈಎಫ್‌ಐ ಜಾಲಹಳ್ಳಿ ವಲಯ ಸಮಿತಿ ಅಧ್ಯಕ್ಷ ಕೊಂಡಯ್ಯ ಗೋಸಲ್, ಕಾರ್ಯದರ್ಶಿ ವೆಂಕಟೇಶ್ ತ್ಯಾಪ್ಲಿ, ಉಪಾಧ್ಯಕ್ಷರಾದ ರಿಯಾಜ್ ಖುರೇಷಿ ಹಾಗೂ ಮಹೆಬೂಬ್ ಖುರೇಷಿ, ಖಜಾಂಚಿ ಮಲ್ಲಯ್ಯ ಗೌಡರು, ಮುಖಂಡ ಲೋಹಿತ್ ಮೋದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಗರದಲ್ಲಿ ರಕ್ತದಾನ, ಆರೋಗ್ಯ ತಪಾಸಣೆ ಮತ್ತು ಅನ್ನದಾನ




ರಾಯಚೂರು, ಸೆ. 2: ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಹಾಗೂ ಜನಸೇನಾ ಪಕ್ಷದ ಸಂಸ್ಥಾಪಕ ಪವನ್ ಕಲ್ಯಾಣ್ ಅವರ 55ನೇ ಜನ್ಮದಿನದ ಅಂಗವಾಗಿ ನಗರದ ಎಲ್‌ಬಿಎಸ್ ನಗರ, ಚಂದ್ರಬಂಡಾ ರಸ್ತೆ ಸಮೀಪದ ಶ್ರೀ ವೀರ ಹನುಮಾನ್ ಸ್ವಾಮಿ ದೇವಸ್ಥಾನದಲ್ಲಿ ಬುಧವಾರ ವಿವಿಧ ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಪವನ್ ಕಲ್ಯಾಣ್ ಅವರ ಜನ್ಮದಿನವನ್ನು ಕೇವಲ ಸಂಭ್ರಮಾಚರಣೆಗೆ ಸೀಮಿತಗೊಳಿಸದೆ, ಸಾರ್ವಜನಿಕರಿಗೆ ಉಪಯುಕ್ತವಾಗುವ ಸೇವಾ ಚಟುವಟಿಕೆಗಳ ಮೂಲಕ ಆಚರಿಸಲಾಯಿತು. ಇದರ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ, ನೇತ್ರ ತಪಾಸಣಾ ಶಿಬಿರ ಹಾಗೂ ಬೃಹತ್ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಶಿಬಿರದಲ್ಲಿ ಸುಮಾರು 50 ಮಂದಿ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿ ಸಾಮಾಜಿಕ ಕಾಳಜಿ ಮೆರೆದರು. ಮಧ್ಯಾಹ್ನ ಸಾರ್ವಜನಿಕರಿಗೆ ಅನ್ನದಾನವೂ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವೈದ್ಯ ಬಸನಗೌಡ ಪಿ. ಪಾಟೀಲ್, ಜನ್ಮದಿನವನ್ನು ಸಮಾಜಮುಖಿ ಸೇವಾ ಕಾರ್ಯಕ್ರಮಗಳ ಮೂಲಕ ಆಚರಿಸುವುದು ಅರ್ಥಪೂರ್ಣವಾಗಿದೆ. ರಕ್ತದಾನ, ಆರೋಗ್ಯ ತಪಾಸಣೆ ಹಾಗೂ ಅನ್ನದಾನದಂತಹ ಸೇವಾ ಕಾರ್ಯಗಳು ನೇರವಾಗಿ ಜನಸಾಮಾನ್ಯರಿಗೆ ನೆರವಾಗುತ್ತವೆ. ವಿಶೇಷವಾಗಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಇಂತಹ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಹಾಗೂ ನಿಯಮಿತವಾಗಿ ರಕ್ತದಾನ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಆರೋಗ್ಯ ಶಿಬಿರದಲ್ಲಿ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿ ವೈದ್ಯರಿಂದ ಅಗತ್ಯ ಸಲಹೆ ಮತ್ತು ಮಾರ್ಗದರ್ಶನ ನೀಡಲಾಯಿತು. ನೇತ್ರ ತಪಾಸಣಾ ಶಿಬಿರದಲ್ಲಿಯೂ ಅನೇಕರು ಭಾಗವಹಿಸಿ ತಪಾಸಣೆ ಮಾಡಿಸಿಕೊಂಡರು. ಸೇವೆಯೇ ಸಂಭ್ರಮ ಎಂಬ ಆಶಯದೊಂದಿಗೆ ಹಮ್ಮಿಕೊಳ್ಳಲಾದ ಕಾರ್ಯಕ್ರಮ ಸಾರ್ವಜನಿಕರ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಮಾರುತಿ ಬಡಿಗೇರ್, ಓಂಕಾರ ಯಾದವ್, ಸಣ್ಣ ಬಾಬು, ಎಸ್. ರವಿಕುಮಾರ್, ನವೀನ್ ರೆಡ್ಡಿ, ನಾಗರಾಜ್ ಮನಸಲಾಪುರ್, ಚಿರಂಜೀವಿ ಯಾದವ್, ತುಳಸಿ ಯಾದವ್, ಸಿ. ತಿಮಪ್ಪ ಕುರ್ತುಕುಂದ ಸೇರಿದಂತೆ ಪವನ್ ಕಲ್ಯಾಣ್ ಅಭಿಮಾನಿಗಳು ಹಾಗೂ ಜನಸೇನಾ ಪಕ್ಷದ ಸದಸ್ಯರು ಉಪಸ್ಥಿತರಿದ್ದರು.

# ಕಿಚ್ಚ ಸುದೀಪ್ ಅವರ ಹುಟ್ಟುಹಬ್ಬ ಆಚರಣೆ



ಲಿಂಗಸುಗೂರ: ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಅವರ 53ನೇ ಹುಟ್ಟುಹಬ್ಬದ ಅಂಗವಾಗಿ,ಅಭಿಮಾನಿಗಳು ಸಂಭ್ರಮದಿದ ಜನ್ಮದಿನ ಆಚರಿಸಿದರು.

ತಾಲೂಕಿನ ಈಚನಾಳ ಗ್ರಾಮದಲ್ಲಿ,ಸುದೀಪ್ ಅವರ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ಗ್ರಾಮದ ಕಿಚ್ಚ ಸುದೀಪ್ ಅಭಿಮಾನಿಗಳು, ಪಟಾಕಿ ಸಿಡಿಸಿ,ಕೇಕ್ ಕತ್ತರಿಸಿ, ಸಿಹಿ ಹಂಚುವ ಮೂಲಕ ತಮ್ಮ ನೆಚ್ಚಿನ ನಟನಿಗೆ ಶುಭಾಶಯ ಕೋರಿದರು. ಸುದೀಪ್ ಅವರ ಚಿತ್ರಕ್ಕೆ ಹೂವಿನ ಹಾರ ಹಾಕಿ, ಅವರ ಸಿನಿಮಾ ಪಯಣ ಹಾಗೂ ಕನ್ನಡ ಚಿತ್ರರಂಗಕ್ಕೆ ನೀಡಿರುವ ಕೊಡುಗೆಯನ್ನು ಸ್ಮರಿಸಿದರು.

ಅಭಿಮಾನಿಗಳು ಮಾತನಾಡಿ, ಕಿಚ್ಚ ಸುದೀಪ್ ಅವರು ತಮ್ಮ ವಿಭಿನ್ನ ಅಭಿನಯ, ಸರಳತೆ ಹಾಗೂ ಸಾಮಾಜಿಕ ಕಳಕಳಿಯಿಂದ ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆ. ಅವರ ಮುಂದಿನ ಸಿನಿಮಾಗಳು ಯಶಸ್ವಿಯಾಗಲಿ, ಉತ್ತಮ ಆರೋಗ್ಯ ಹಾಗೂ ದೀರ್ಘಾಯುಷ್ಯ ದೊರೆಯಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಕಿಚ್ಚ ಸುದೀಪ್ ರವರ ಅಭಿಮಾನಿಗಳು ಹಾಗೂ ಯುವಕರು ಇದ್ದರು.

# ಇಂದು ವಿದ್ಯುತ್ ವ್ಯತ್ಯಯ

ರಾಯಚೂರು ಸೆಪ್ಟಂಬರ್ 02 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ವ್ಯಾಪ್ತಿಯಲ್ಲಿ ಹಜಾರ್ ಡಸ್ ಕಾಮಗಾರಿ ಮತ್ತು ಜಿಓಎಸ್ ಕಾಮಗಾರಿ ಸ್ಥಾಪಿಸುವ ಹಿನ್ನಲೆಯಲ್ಲಿ ಸೆಪ್ಟಂಬರ್ 03ರ ಬೆಳಿಗ್ಗೆ 10ರಿಂದ ಸಂಜೆ 5.30ರವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 10ರಿಂದ ಎಲ್.ಐ.ಸಿ ಎದುರಗಡೆ, ಅಂಬೇಡ್ಕರ್ ಸರ್ಕಲ್, ಬಸ್ಟಾಂಡ್, ಹಳೆ ನಗರಸಭೆ, ತಹಶೀಲ್ ಕಚೇರಿ, ಜೆರಾಕ್ಸ್ ಲೈನ್, ಆಂದ್ರೂನ್ ಕಿಲ್ಲಾ, ಏಕ್ ಮಿನಾರ್ ರೋಡ್, ಜಾಕೀರ್ ಹುಸೇನ್ ಚೌಕ್, ಗಂಗಾ ನಿವಾಸ, ಪೇಟ್ಲಾ ಬ್ರಿಡ್ಜ್, ತೀನ್ ಕಂದೀಲ್ ಏರಿಯಾ, ಮಚಿಲಿ ಬಜಾರ್ ರೋಡ್, ಅಶೋಕ್ ಡಿಪೋ, ಮಂಗಳವಾರಪೇಟೆ, ಕಮೇಲ್, ಉರುಕುಂದಿ ಈರಣ್ಣಗುಡಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕಿಸಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕುರಿತು ಇಂದು ಪೂರ್ವಭಾವಿ ಸಭೆ

ರಾಯಚೂರು ಸೆಪ್ಟಂಬರ್ 02 (ಕರ್ನಾಟಕ ವಾರ್ತೆ): ಜಿಲ್ಲಾಡಳಿತದ ವತಿಯಿಂದ ಸೆಪ್ಟಂಬರ್ 17ರಂದು ನಡೆಯುವ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಆಚರಿಸುವ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟಂಬರ್ 03ರ ಬೆಳಿಗ್ಗೆ 11ಗಂಟೆಗೆ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಂಬಧಿಸಿದ ಅಧಿಕಾರಿಗಳು ಸಭೆಗೆ ಹಾಜರಾಗಿ ತಮ್ಮ ಅಮೂಲ್ಯವಾದ ಸಲಹೆ ಸೂಚನೆಗಳನ್ನು ನೀಡಿ, ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K